07 ಅಗಸ್ಟ್ 2025 ಗುರುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 149 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629


ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ

ಜುಲೈ ತಿಂಗಳ ಐಸಿಸಿ ತಿಂಗಳ ಆಟಗಾರ ಪ್ರಶಸ್ತಿಗೆ ಭಾರತ ತಂಡದ ನಾಯಕ ಶುಭಮನ್ ಗಿಲ್ ಸೇರಿ ಮೂವರು ಆಟಗಾರರು ನಾಮನಿರ್ದೇಶನ ಗೊಂಡಿದ್ದಾರೆ. ದಕ್ಷಿಣ ಆಫ್ರಿಕಾದ ವಿಯಾನ್ ಮಲ್ಡರ್ ಮತ್ತು ಇಂಗ್ಲೆಂಡ್ ತಂಡದ ನಾಯಕ ಬೆನ್ ಸ್ಟೋಕ್ಸ್ ಇತರೆ ಇಬ್ಬರು.





ಜನ ಸ್ಪಂದನ : ಪ್ರಯೋಜನ ಪಡೆಯಿರಿ » 2

ರಾಷ್ಟ್ರೀಯ ಕ್ರೀಡಾ ಆಡಳಿತ ಮಸೂದೆಯಲ್ಲಿ ಆರ್‌ಟಿಐಗೆ ಸಂಬಂಧಿಸಿದ ನಿಯಮದಲ್ಲಿ ತಿದ್ದುಪಡಿ ತರಲಾಗಿದೆ. ಅದರ ಪ್ರಕಾರ ಸರ್ಕಾರದಿಂದ ಅನುದಾನ ಮತ್ತು ನೆರವು ಪಡೆಯುವ ಕ್ರೀಡಾ ಫೆಡರೇಷನ್‌ಗಳು ಮಾತ್ರ ಆರ್‌ಟಿಗೆ ವ್ಯಾಪ್ತಿಗೆ ಬರಲಿವೆ. ಹೀಗಾಗಿ ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿಗೆ ಕೊಂಚ ನೆಮ್ಮದಿ ಮೂಡಿದೆ.



ಎಸ್‌ಐಆರ್ ಚರ್ಚೆಗೆ ಪಟ್ಟು : ಕಲಾಪ ಮುಂದೂಡಿಕೆ » 4

# ಆಮದು ಸುಂಕ ಶೇ.50ಕ್ಕೆ ಏರಿಸಿದ ಟ್ರಂಪ್

## ರಷ್ಯಾದಿಂದ ಕಚ್ಚಾ ತೈಲ ಪಡೆದುಕೊಂಡಿದ್ದಕ್ಕೆ ಭಾರತದ ವಿರುದ್ಧ ಕಿಡಿ | ಸೇಡಿನಿಂದ ಮತ್ತೆ ಶೇ.25ರಷ್ಟು ಹೆಚ್ಚುವರಿ ಸುಂಕ ಶಾಕ್

• ಪ್ರಜೋದಯ ವರದಿ


**ವಾಷಿಂಗ್ಟನ್:** ರಷ್ಯಾದಿಂದ ಕಚ್ಚಾತೈಲ ಆಮದು ಮಾಡಿಕೊಳ್ಳುತ್ತಿರುವ ಭಾರತದ ವಿರುದ್ಧ ಕೆಂಡ ಕಾರುತ್ತಿರುವ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಭಾರತದ ಸರಕುಗಳ ಮೇಲೆ ಹೆಚ್ಚುವರಿಯಾಗಿ ಶೇ.25ರಷ್ಟು ಸುಂಕವನ್ನು ಹೇರಿದ್ದಾರೆ. ಈ ಮೂಲಕ ಅಮೇರಿಕಾವು ಭಾರತಕ್ಕೆ ಒಟ್ಟು ಶೇ.50ರಷ್ಟು ಸುಂಕ ಹೆಚ್ಚಿಸಿದೆ.

ಈ ಆದೇಶಕ್ಕೆ ಡೊನಾಲ್ಡ್ ಟ್ರಂಪ್ ಬುಧವಾರ ಸಹಿ ಹಾಕಿದ್ದಾರೆ. ಆದೇಶದ ಪ್ರಕಾರ ಭಾರತದಿಂದ ಅಮೇರಿಕಾಕ್ಕೆ ಆಮದು ಮಾಡಿಕೊಳ್ಳುವ ಸರಕುಗಳು ಹೆಚ್ಚುವರಿಯಾಗಿ ಶೇ.25 ಆಮದು ಸುಂಕವನ್ನು ಎದುರಿಸಬೇಕಾಗುತ್ತದೆ.

ಭಾರತವು ನಮ್ಮ ಉತ್ತಮ ವ್ಯಾಪಾರ ಪಾಲುದಾರನಲ್ಲ. ಏಕೆಂದರೆ ಭಾರತ ನಮ್ಮೊಂದಿಗೆ ಬಹಳಷ್ಟು ವ್ಯವಹಾರ ಮಾಡುತ್ತಾರೆ. ಆದರೆ, ನಾವು ಅವರೊಂದಿಗೆ ವ್ಯಾಪಾರ ಮಾಡಲ್ಲ. ಆದ್ದರಿಂದ ನಾವು ಶೇ.25 ಪ್ರತಿಶತದಷ್ಟು ಇತ್ಯರ್ಥಪಡಿಸಿಕೊಂಡಿದ್ದೇವೆ. ನಾವು ಹೇಳಿದ ಮೇಲೂ ರಷ್ಯಾದಿಂದ ನಿರಂತರವಾಗಿ ತೈಲ ಖರೀದಿ ಮಾಡಲಾಗುತ್ತಿದೆ. ಈ ಮೂಲಕ ಭಾರತ ರಷ್ಯಾದ ಯುದ್ಧದ ಯಂತ್ರಕ್ಕೆ ಇಂಧನ ತುಂಬುತ್ತಿದೆ. ಹಾಗಾಗಿ ಮುಂದಿನ 24 ಗಂಟೆಗಳಲ್ಲಿ ಆಮದುಗಳ ಮೇಲೆ ಸುಂಕವನ್ನು ಗಣನೀಯವಾಗಿ ಏರಿಕೆ ಮಾಡುವುದಾಗಿ ಟ್ರಂಪ್ ಮಂಗಳವಾರ ಬೆದರಿಕೆಯೊಡ್ಡಿದ್ದರು. ಅದರಂತೆ ಭಾರತದ ಮೇಲೆ ಶೇ.50 ಸುಂಕ ವಿಧಿಸಿ ಆದೇಶ ಹೊರಡಿಸಿದ್ದಾರೆ.

**ಬೆದರಿಕೆಯೊಡ್ಡಿದ್ದ ಟ್ರಂಪ್**

ಸುಂಕ ಗಣನೀಯ ಏರಿಕೆ ಕುರಿತು ಮಾತನಾಡಿದ ಟ್ರಂಪ್, ಭಾರತ ರಷ್ಯಾದಿಂದ ದೊಡ್ಡ ಪ್ರಮಾಣದಲ್ಲಿ ಕಚ್ಚಾ ತೈಲ ಪಡೆಯುತ್ತಿದೆ. ಈ ಮೂಲಕ ದೊಡ್ಡ ಪ್ರಮಾಣದಲ್ಲಿ ಲಾಭ ಮಾಡಿಕೊಳ್ಳುತ್ತಿದೆ. ಭಾರತವು ದೊಡ್ಡ ಪ್ರಮಾಣದಲ್ಲಿ ರಷ್ಯಾದ ತೈಲ ಮಾತ್ರ ಖರೀದಿಸುತ್ತಿಲ್ಲ, ಖರೀದಿಸಿದ ತೈಲವನ್ನು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡಿ, ದೊಡ್ಡ ಪ್ರಮಾಣದ ಲಾಭವಾಗುತ್ತಿದೆ. ರಷ್ಯಾದ ಯುದ್ಧ ಟ್ಯಾಂಕರ್‌ಗಳಿಂದ ಉಕ್ರೇನ್‌ನಲ್ಲಿ ಜನರು ಸಾಯುತ್ತಿದ್ದರೂ ಅವರು ಹೆದರುತ್ತಿಲ್ಲ. ಈ ಕಾರಣದಿಂದಲೇ, ಭಾರತದಿಂದ ಖರೀದಿಸುವ ಎಲ್ಲಾ ಸರಕುಗಳಿಗೂ ಸುಂಕವನ್ನು ಗಣನೀಯವಾಗಿ ಏರಿಕೆ ಮಾಡಲಾಗುವುದೆಂದು ಎಚ್ಚರಿಕೆ ನೀಡಿದ್ದರು. ಈ ಮೊದಲು ಆಗಸ್ಟ್ 1ರಿಂದ ಅನ್ವಯವಾಗುವಂತೆ ಭಾರತದಿಂದ ಆಮದು ಮಾಡಿಕೊಳ್ಳುವ ಎಲ್ಲಾ ಸರಕುಗಳಿಗೂ ಶೇ.25 ರಷ್ಟು ಸುಂಕ ವಿಧಿಸುವ ಆದೇಶಕ್ಕೆ ಸಹಿ ಹಾಕಿದ್ದರು. ಇದೀಗ ಮತ್ತೆ ಶೇ.25ರಷ್ಟು ಶುಂಕ ಹೆಚ್ಚಿಸಿದ್ದಾರೆ.



**ಜಾಗತಿಕವಾಗಿ ನಗೆಪಾಟಲಿಗೆ ಗುರಿಯಾದ ಟ್ರಂಪ್**

ರಷ್ಯಾದ ತೈಲ ಆಮದುಗಳ ಮೇಲೆ ಭಾರತಕ್ಕೆ ಅಮೇರಿಕಾ ವಿಧಿಸುವ ಸುಂಕ ಬೆದರಿಕೆಗಳ ಮಧ್ಯೆ, ಡೊನಾಲ್ಡ್ ಟ್ರಂಪ್ ಅವರು ಮಾಸ್ಕೋ ಜೊತೆಗಿನ ವಾಷಿಂಗ್ಟನ್‌ನ ಯುರೇನಿಯಂ ಮತ್ತು ರಸಗೊಬ್ಬರ ವ್ಯಾಪಾರದ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ಹೇಳಿರುವುದು ಜಾಗತಿಕವಾಗಿ ನಗೆಪಾಟಲಿಗೆ ಗುರಿಯಾಗಿದೆ.

ಶ್ವೇತಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅಮೇರಿಕಾ ರಷ್ಯಾದಿಂದ ಯುರೇನಿಯಂ ಮತ್ತು ರಸಗೊಬ್ಬರ ಆಮದು ಮಾಡಿಕೊಳ್ಳುವ ಕುರಿತು ಪ್ರತಿಕ್ರಿಯಿಸಿ, ಈ ಕುರಿತು ನನಗೆ ಯಾವುದೇ ಮಾಹಿತಿ ಇಲ್ಲ. ಪರಿಶೀಲನೆ ನಡೆಸುತ್ತೇನೆಂದು ಚುಟುಕಾಗಿ ಉತ್ತರಿಸಿದ್ದಾರೆ. ರಷ್ಯಾ ಜೊತೆ ವ್ಯಾಪಾರ ಸಂಬಂಧ ಮುಂದುವರಿಸುವ ರಾಷ್ಟ್ರಗಳ ಮೇಲಿನ ಸುಂಕಗಳನ್ನು ಹೆಚ್ಚಿಸುವುದಾದರೆ, ಅಮೇರಿಕಾದ ಮೇಲೂ ಸುಂಕ ವಿಧಿಸಬೇಕಾಗುತ್ತದೆ.

**ಪ್ರಧಾನಿ ಪ್ರತ್ಯುತ್ತರ**

ಪ್ರಧಾನಮಂತ್ರಿ ನರೇಂದ್ರ ಮೋದಿ ಕೂಡ ಅಮೇರಿಕಾದ ಸುಂಕ ಬೆದರಿಕೆಗಳಿಗೆ ಪ್ರತ್ಯುತ್ತರ ನೀಡಿದ್ದು, ಸ್ಥಳೀಯ ಉತ್ಪನ್ನಗಳ ಮಾರಾಟ ಮತ್ತು ಖರೀದಿ ಮಾಡುವ ಮೂಲಕ ದೇಶದ ಆರ್ಥಿಕತೆಯನ್ನು ಸುದೃಢಗೊಳಿಸುವಂತೆ, ದೇಶವಾಸಿಗಳಿಗೆ ಕರೆ ನೀಡಿದ್ದಾರೆ.

**ವೈಟ್‌ಹೌಸ್ ಪ್ರಕಟಣೆ**

ಶುಂಕ ಹೆಚ್ಚಳದ ಬಗ್ಗೆ ಅಧಿಕೃತ ಪ್ರಕಟಣೆ ಹೊರಡಿಸಿರುವ ಅಮೇರಿಕಾ ಶ್ವೇತಭವನ, ರಷ್ಯಾದಿಂದ ಕಚ್ಚತೈಲ ಆಮದು ಮಾಡಿಕೊಳ್ಳುತ್ತಿರುವ ಭಾರತದ ಮೇಲೆ ದಂಡದ ರೂಪದಲ್ಲಿ ಶೇ.25ರಷ್ಟು ಹೆಚ್ಚುವರಿ ಸುಂಕಗಳನ್ನು ವಿಧಿಸಲಾಗಿದೆ. ಒಂದು ವೇಳೆ ಭಾರತವು ರಷ್ಯಾದಿಂದ ಕಚ್ಚಾತೈಲ ಆಮದು ಮಾಡಿಕೊಳ್ಳುವುದನ್ನು ನಿಲ್ಲಿಸದೇ ಹೋದರೆ, ಈ ಆದೇಶ 21 ದಿನಗಳ ಬಳಿಕ ಅಧಿಕೃತವಾಗಿ ಜಾರಿಯಾಗಲಿದೆ ಎಂದು ಸ್ಪಷ್ಟಪಡಿಸಿದೆ.

# ಹಾಕಿ-ಫುಟ್‌ಬಾಲ್ ಟರ್ಫ್ ಮೈದಾನಕ್ಕೆ 10 ಕೋ.ರೂ. ಅನುದಾನ

## ಶಾಸಕ ಹೆಚ್.ಪಿ.ಸ್ವರೂಪ್ ಮನವಿಗೆ ಕೇಂದ್ರ ಸರ್ಕಾರ ಅನುಮೋದನೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ ಮತ್ತು ಫುಟ್‌ಬಾಲ್ ಆಟಗಳಿಗಾಗಿ ಅಂತರ ರಾಷ್ಟ್ರೀಯ ಗುಣಮಟ್ಟದ ಸಿಂಥೆಟಿಕ್ ಟರ್ಫ್ ಮೈದಾನ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಮೊದಲ ಹಂತದಲ್ಲಿ 10 ಕೋಟಿ ರೂ. ಬಿಡುಗಡೆಗೆ ಅನುಮೋದನೆ ದೊರೆತಿದೆ.

ಈ ಬಗ್ಗೆ ಶಾಸಕ ಹೆಚ್.ಪಿ.ಸ್ವರೂಪ್ ಅವರು, 2024 ಅಕ್ಟೋಬರ್ 14 ರಂದು ಸಿಂಥೆಟಿಕ್ ಟರ್ಫ್ ಮೈದಾನ ನಿರ್ಮಾಣ ಮಾಡಲು 30 ಕೋಟಿ ರೂ. ವೆಚ್ಚದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದರು. ಬಳಿಕ ಪ್ರಸ್ತಾವನೆ ಜೊತೆಗೆ ಅನುದಾನ ಒದಗಿಸಲು ನೆರವಾಗುವಂತೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಪತ್ರ ಬರೆದು ಕೋರಿಕೊಂಡಿದ್ದರು.

ಅದರಂತೆ ಕುಮಾರಸ್ವಾಮಿ ಅವರು ಕೇಂದ್ರ ಕ್ರೀಡಾ ಹಾಗು ಯುವ ವ್ಯವಹಾರಗಳ ಸಚಿವ ಡಾ. ಮನ್ಸುಖ್ ಮಾಂಡವೀಯ ಅವರೊಂದಿಗೆ ಚರ್ಚಿಸಿದ್ದು, ಮೊದಲ ಕಂತಿನಲ್ಲಿ 10 ಕೋ. ರೂ. ಅನುಮೋದನೆ ಕೊಡಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಶಾಸಕ ಹೆಚ್.ಪಿ.ಸ್ವರೂಪ್ ಅವರು, ಜಿಲ್ಲಾ ಕ್ರೀಡಾಂಗಣ 30 ಎಕರೆ ವಿಸ್ತೀರ್ಣ ಇದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಈಗಾಗಲೇ ವಿವಿಧ ರೀತಿಯ ಮೂಲಸೌಲಭ್ಯ ಕಲ್ಪಿಸಿದೆ. ಜೊತೆಗೆ ಫುಟ್‌ಬಾಲ್, ಹಾಕಿ, ವಾಲಿಬಾಲ್ ಕ್ರೀಡಾಕೂಟ ಹಾಗು ತಾಲೀಮಿಗೆಂದು ಆಟದ ಮೈದಾನಗಳನ್ನೂ ನಿರ್ಮಾಣ ಮಾಡಿದೆ. ಹೀಗಾಗಿ ಇಲ್ಲಿ ವಿವಿಧ ಕ್ರೀಡಾಕೂಟ ನಡೆಸಲು ಉತ್ತಮ ವ್ಯವಸ್ಥೆ ಇದೆ. ಜೊತೆಗೆ ಉತ್ತಮ ಹಾಗು ಸದೃಢ ಆರೋಗ್ಯ ಕಾಪಾಡಿಕೊಳ್ಳಲು ವಾಯುವಿಹಾರ, ಕ್ರೀಡೆಗಾಗಿ ಉತ್ತಮ ವೇದಿಕೆ ಇದಾಗಿದೆ ಎಂದು ಈ ಹಿಂದೆಯೇ ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿಕೊಡಲಾಗಿದೆ ಎಂದರು.

ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ ಕೋರ್ಟ್ ಹಾಗು ಫುಟ್‌ಬಾಲ್ ಮೈದಾನ ಇದ್ದು, ನೂರಾರು ಹಿರಿಯ ಹಾಗು ಯುವ ಆಟಗಾರರು ಇಲ್ಲಿ ಪ್ರತಿದಿನ ಅಭ್ಯಾಸ ಮಾಡುತ್ತಾರೆ. ಇಲ್ಲಿ ಅಭ್ಯಾಸ ಮಾಡಿದವರು ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗಿಯಾಗಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಇನ್ನೂ ಕೆಲವರು ದೇಶ ಮಟ್ಟದ ಶಿಬಿರಗಳಲ್ಲಿ ತರಬೇತಿಗೆ ಆಯ್ಕೆ ಆಗಿದ್ದಾರೆ. ಮತ್ತೆ ಕೆಲವರು ವಿವಿಧ ಕ್ರೀಡಾಕ್ಲಬ್‌ಗಳಿಗೆ ಆಯ್ಕೆಯಾಗಿ ತಮ್ಮ ಕ್ರೀಡಾಸ್ಫೂರ್ತಿ ಮೆರೆಯುತ್ತಿದ್ದಾರೆ ಎಂದರು.

ಹೀಗಾಗಿ ವಿಶೇಷವಾಗಿ ಫುಟ್‌ಬಾಲ್ ಮತ್ತು ಹಾಕಿ ಆಟಗಳಿಗೆ ಪೂರಕವಾದ ಅತ್ಯುತ್ತಮ ವಾತಾವರಣ ಕಲ್ಪಿಸಬೇಕು. ಕ್ರೀಡಾ ಮೈದಾನಗಳನ್ನು ಮೇಲ್ದರ್ಜೆಗೇರಿಸಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡಾಕೂಟ ನಡೆಸಲು ಅನುಕೂಲ ಮಾಡಿಕೊಡಬೇಕಿದೆ. ಅದಕ್ಕಾಗಿ ಅಂತರರಾಷ್ಟ್ರೀಯ ಗುಣಮಟ್ಟದ ಸಿಂಥೆಟಿಕ್ಸ್ ಮೈದಾನ ನಿರ್ಮಾಣ ಮಾಡುವುದು ಅಗತ್ಯವಿದೆ. ಅದಕ್ಕಾಗಿ 30 ಕೋಟಿ ರೂ. ವೆಚ್ಚವಾಗಲಿದೆ ಎಂದು ಲೋಕೋಪಯೋಗಿ ಇಲಾಖೆ ಅಂದಾಜು ಪಟ್ಟಿ ತಯಾರಿಸಿದ್ದು, ಕೇಂದ್ರ ಸರ್ಕಾರದ ಖೇಲೋ ಇಂಡಿಯಾ ಯೋಜನೆಯಡಿ 30 ಕೋಟಿ ರೂ. ಅನುದಾನ ನೀಡಬೇಕೆಂದು ಮನವಿ ಮಾಡಲಾಗಿದೆ ಎಂದು ವಿವರಣೆ ನೀಡಿದರು.



# ಕಾಡಾನೆ ದಾಳಿ: ಮಹಿಳೆಗೆ ಗಂಭೀರ ಗಾಯ

• ಪ್ರಜೋದಯ ವರದಿ

**ಅರಕಲಗೂಡು:** ಒಂಟಿಸಲಗ ದಾಳಿ ನಡೆಸಿ ಮಹಿಳೆಯನ್ನು ಗಂಭೀರವಾಗಿ ಗಾಯ ಗೊಳಿಸಿರುವ ಘಟನೆ ತಾಲ್ಲೂಕಿನ ಮದಲಾಪುರ ಗ್ರಾಮದಲ್ಲಿ ಮಂಗಳವಾರ ರಾತ್ರಿ ನಡೆದಿದೆ. ಕಮಲಮ್ಮ ಗಾಯಗೊಂಡ ಮಹಿಳೆ.

ಕಮಲಮ್ಮ ಅವರು ಊಟ ಮುಗಿಸಿಕೊಂಡು ಮನೆಯಿಂದ ಹೊರಗೆ ಬಂದ ವೇಳೆ, ಆಹಾರ ಅರಸಿ ಮನೆಯ ಬಳಿ ಬಂದು ನಿಂತಿದ್ದ ಕಾಡಾನೆ ಏಕಾಏಕಿ ಅವರ ಮೇಲೆ ದಾಳಿ ನಡೆಸಿ, ದಂತದಿಂದ ತಿವಿದು ಗಂಭೀರವಾಗಿ ಗಾಯಗೊಂಡು, ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಮಹಿಳೆ ನೋವಿನಿಂದ ಕಿರುಚಾಡುತ್ತಿದ್ದಂತೆ, ಹತ್ತಿರದಲ್ಲಿದ್ದ ಗ್ರಾಮಸ್ಥರು ತಕ್ಷಣ ಸ್ಥಳಕ್ಕೆ ಧಾವಿಸಿ ಸಹಾಯಕ್ಕೆ ಮುಂದಾಗಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಜನರು ಬಂದ ಕಾರಣ, ಒಂಟಿ ಸಲಗ ಸ್ಥಳದಿಂದ ಮಹಿಳೆಯನ್ನು ಬಿಟು ಹೋಗಿದೆ. ಗಾಯಾಳು ಕಮಲಮ್ಮ ಅವರನ್ನು ತಕ್ಷಣ ಅರಕಲಗೂಡು ತಾಲ್ಲೂಕು ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಹಾಸನದ ಹಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಗ್ರಾಮಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾಡಾನೆ ಚಲನವಲಗಳ ಮೇಲೆ ನಿಗಾ ವಹಿಸಿದ್ದಾರೆ. ಕಾಡಾನೆ ಗ್ರಾಮದ ಸುತ್ತಮುತ್ತಲಿನಲ್ಲೇ ಓಡಾಡುತ್ತಿರುವುದರಿಂದ ಜನರು ಜೀವನ ಭಯದಿಂದ ಮನೆಯಿಂದ ಹೊರಲು ಹಿಂದೇಟು ಹಾಕುವಂತಾಗಿದೆ.



# ಅರಣ್ಯ ಇಲಾಖೆ ಕಿರುಕುಳ : ಪ್ರತಿಭಟನೆ ಹಾದಿ ಹಿಡಿದ ಸಂತ್ರಸ್ತರು

## ಮೂರ್ಕಣ್ಣು ಗುಡ್ಡ ವ್ಯಾಪ್ತಿ 8 ಗ್ರಾಮ ಜನರ ಒಕ್ಕಲೆಬ್ಬಿಸಲು ಹುನ್ನಾರ | ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ನೇತೃತ್ವದಲ್ಲಿ ಪ್ರತಿಭಟನೆ

• ಪ್ರಜೋದಯ ವರದಿ

**ಸಕಲೇಶಪುರ:** ಅರಣ್ಯ ಇಲಾಖೆ ಅಧಿಕಾರಿಗಳು ತಾಲ್ಲೂಕಿನ ಮೂರ್ಕಣ್ಣು ಗುಡ್ಡ ವ್ಯಾಪ್ತಿಯಲ್ಲಿ ನೆಲೆಸಿರುವ 8 ಗ್ರಾಮಗಳ ಸಾವಿರಾರು ಕುಟುಂಬಗಳಿಗೆ ನೋಟೀಸ್ ನೀಡಿ ಒಕ್ಕಲೆಬ್ಬಿಸಲು ಹುನ್ನಾರ ನಡೆಸಿದೆ ಎಂದು ಆರೋಪಿಸಿ ಸಂತ್ರಸ್ತರು ಪ್ರತಿಭಟನಾ ಹಾದಿ ಹಿಡಿದ್ದಾರೆ.

ಮೂರ್ಕಣ್ಣುಗುಡ್ಡ ಅಧಿಸೂಚಿತ ಸೆಕ್ಷನ್-4 ಅರಣ್ಯ ಪ್ರದೇಶವೆಂದು ಬಾಧಿತರಾದ ಕಾಡುಮನೆ, ಕ್ಯಾಮನಹಳ್ಳಿ, ಜಂಬರಡಿ, ಅಚ್ಚನಹಳ್ಳಿ, ಅಗನಿ, ನಡಹಳ್ಳಿ, ಮಕ್ಕಿಹಳ್ಳಿ, ಮಾದಾನಪುರ ಗ್ರಾಮಸ್ಥರಿಗೆ ಅರಣ್ಯ ಇಲಾಖೆ ನೋಟೀಸ್ ನೀಡುವ ಮೂಲಕ ಒಕ್ಕಲೆಬ್ಬಿಸುವ ಹುನ್ನಾರ ನಡೆಸಿರುವುದಕ್ಕೆ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬುಧವಾರ ನೂರಾರು ಜನರು ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಅವರ ನೇತೃತ್ವದಲ್ಲಿ ಮೂರ್ಕಣ್ಣು ಗುಡ್ಡ ಪ್ರವೇಶ ದ್ವಾರದ ಬಳಿ ಪ್ರತಿಭಟನೆ ನಡೆಸಿ, ಅರಣ್ಯ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಅಗನಿ ಗ್ರಾಮದಿಂದ ಪಟ್ಟಣಕ್ಕೆ ಆಗಮಿಸಿದ ಪ್ರತಿಭಟನಾ ಕಾರರು, ಶಾಸಕ ಸಿಮೆಂಟ್ ಮಂಜು ಮತ್ತು ತಹಶೀಲ್ದಾರ್ ಸುಪ್ರೀತಾ ಅವರಿಗೆ ಮನವಿ ಸಲ್ಲಿಸಿದರು.

**ಅರಣ್ಯ ಇಲಾಖೆಯಿಂದ ದೌರ್ಜನ್ಯ**

ಪ್ರತಿಭಟನಾ ಸ್ಥಳದಲ್ಲಿ ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಅವರು ಮಾತನಾಡಿ, ಅರಣ್ಯ ಇಲಾಖೆ ಮೂರ್ಕಣ್ಣು ಗುಡ್ಡ ವ್ಯಾಪ್ತಿಯ ಜನರ ಮೇಲೆ ದೌರ್ಜನ್ಯ ನಡೆಸುತ್ತಿದೆ. 1920ರಲ್ಲಿ ಅಂದಿನ ಮೈಸೂರು ಸರ್ಕಾರ 8 ಗ್ರಾಮಗಳ 7,938 ಎಕರೆ ಪ್ರದೇಶವನ್ನು ಅಭಯಾರಣ್ಯ ಮಾಡುವ ನಿಟ್ಟಿನಲ್ಲಿ ಸೆಕ್ಷನ್-4 ಜಾರಿಗೊಳಿಸಿತ್ತು. ಸ್ಥಳೀಯರ ವಿರೋಧದ ಹಿನ್ನಲೆ 1924ರಲ್ಲಿ ಈ ವ್ಯಾಪ್ತಿಯನ್ನು ಸೆಕ್ಷನ್-4ರಿಂದ ಕೈಬಿಡಲಾಯಿತು. ಶತಮಾನದ ನಂತರ ಈ ಯೋಜನೆಗೆ ಮರುಜೀವ ನೀಡಿರುವ ಅರಣ್ಯ ಇಲಾಖೆ, ಈ ಭಾಗವನ್ನು ಅಭಯಾರಣ್ಯವಾಗಿ ಘೋಷಿಸುವ ಹೆಜ್ಜೆ ಇಟ್ಟಿದೆ ಎಂದು ದೂರಿದರು.

ಕೆಲ ದಿನಗಳಿಂದ ಈ ಭಾಗದ ರೈತರಿಗೆ ಅರಣ್ಯ ಇಲಾಖೆ ಮಾನಸಿಕ ಹಿಂಸೆ ನೀಡುತ್ತಿದ್ದು, ತೋಟ ನಿರ್ಮಿಸಿಕೊಳ್ಳಲು, ರಸ್ತೆ ನಿರ್ಮಿಸಲು, ಮನೆ ಕಟ್ಟಲು ತಡೆ ವಿಧಿಸುತ್ತಿದೆ. ಅದರಿಂದ ಜನಜೀವನ ಸಂಕಷ್ಟದಲ್ಲಿದೆ. 1920ರಿಂದ ಹಲವು ಹಂತಗಳಲ್ಲಿ ರೈತರಿಗೆ ಸರ್ಕಾರ ಭೂಮಿ ಮಂಜೂರು ಮಾಡಿದ್ದು, ಫಾರಂ-50, 53 ರಲ್ಲೂ ಭೂಮಿ ನೀಡಲಾಗಿದೆ. 94-ಸಿ ಯೋಜನೆಯಡಿ ಬಡವರಿಗೆ ಮನೆಗಳನ್ನು ನೀಡಲಾಗಿದೆ. ಅತ್ಯಂತ ಮುಖ್ಯವಾಗಿ, ಈ ವ್ಯಾಪ್ತಿಯಲ್ಲೇ ಸರ್ಕಾರದ ಮಹತ್ವದ ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆ ಜಾರಿಗೊಂಡಿದೆ. ಶತಮಾನದ ಅವಧಿಯಲ್ಲಿ ಹಲವು ಸರ್ಕಾರಿ ಯೋಜನೆಗಳು ಮತ್ತು ದೊಡ್ಡ ಕಂಪನಿಗಳ ಸ್ಥಾಪನೆ ಈ ಭಾಗದಲ್ಲಿ ನಡೆದಿದೆ. ಆದರೆ, ಅರಣ್ಯ ಇಲಾಖೆ ದೊಡ್ಡ ಕಂಪನಿಗಳ ವಿರುದ್ಧ

» ನಾಲ್ಕನೇ ಪುಟದಲ್ಲಿ



ಸಾವಿರಾರು ವರ್ಷಗಳ ಹಳೆದ ಆದೇಶ ನೆಪ ಮಾಡಿಕೊಂಡು, ಅರಣ್ಯ ಇಲಾಖೆ ನೋಟೀಸ್ ಹೆಸರಿನಲ್ಲಿ ಕಿರುಕುಳ ನೀಡಲು ಮುಂದಾಗಿರುವುದು ಖಂಡನೀಯ. ಇದೊಂದು ಹಸಿರು ದೀಣೆಯಾಗಿದೆ. ಮೈಸೂರು ಮಹಾರಾಜರ ಕಾಲದಲ್ಲಿ ಮೀಸಲು ಅರಣ್ಯ ಎಂದು ಘೋಷಣೆ ಮಾಡಿದ್ದನ್ನು ಕೇವಲ 4 ವರ್ಷಗಳ ಅಂತರದಲ್ಲಿ ರದ್ದು ಮಾಡಲಾಗಿದೆ. ಆದರೆ ಅರಣ್ಯ ಇಲಾಖೆಯವರು ಒಕ್ಕಲೆಬ್ಬಿಸಲು ಇನ್ನಿಲ್ಲದ ಪ್ರಯತ್ನ ಮಾಡುತ್ತಿರುವುದನ್ನು ಕೈ ಬಿಡಬೇಕು.
-ಹೆಚ್.ಎಂ.ವಿಶ್ವನಾಥ್, ಮಾಜಿ ಶಾಸಕ

ನಮ್ಮ ಪೂರ್ವಜರು ನೂರಾರು ವರ್ಷಗಳಿಂದ ಅರಣ್ಯ ಉಳಿಸಿಕೊಂಡು ಜೀವನ ನಡೆಸಿಕೊಂಡು ಬಂದಿದ್ದಾರೆ. 500ಕ್ಕೂ ಹೆಚ್ಚು ಜನರ ಹೆಸರಲ್ಲಿ ಪಹಣಿ ಇದೆ. ಆದರೆ ಅವರಿಗೆಲ್ಲ ಅರಣ್ಯ ಇಲಾಖೆ ನೋಟೀಸ್ ನೀಡುವ ಕಿರುಕುಳ ನೀಡುತ್ತಿದೆ. ಅರಣ್ಯ ಇಲಾಖೆ ಜೀವಂತ ಮರಣ ವಿಧಿಸಿದೆ, ಯಾವುದೇ ಕೆಲಸ ಮಾಡಲು ಬಿಡುತ್ತಿಲ್ಲ.
-ಪೂರ್ಣೇಶ್, ಗ್ರಾಮದ ಮುಖಂಡ

ನಮ್ಮೂರಿಗೆ ಸರಿಯಾದ ರಸ್ತೆ ಇಲ್ಲ, ಯಾವುದೇ ಅಭಿವೃದ್ಧಿ ಕೆಲಸ ಮಾಡಲು ಅರಣ್ಯ ಇಲಾಖೆ ಅಧಿಕಾರಿಗಳು ಬಿಡುತ್ತಿಲ್ಲ. ರಸ್ತೆಗಾಗಿ ಹಲವು ವರ್ಷಗಳಿಂದ ಹೋರಾಟ ಮಾಡಿಕೊಂಡು ಬಂದರೂ ಆಗಿಲ್ಲ. ಹೀಗಾದರೆ ಬಡವರು ಎಲ್ಲಿಗೆ ಹೋಗಬೇಕು.
-ಪೂರ್ಣ, ಗ್ರಾಮದ ಮಹಿಳೆ

# ಶಿರಾಡಿ ಘಾಟ್‌ನಲ್ಲಿ ಸರಣಿ ಅಪಘಾತ: ಪರಿಹಾರ ಕ್ರಮಕ್ಕೆ ಸೂಚನೆ

• ಪ್ರಜೋದಯ ವರದಿ

**ಸಕಲೇಶಪುರ:** ರಾಷ್ಟ್ರೀಯ ಹೆದ್ದಾರಿ 75ರ ಮಾರನಹಳ್ಳಿಯಿಂದ ಗುಂಡ್ಯ ವರೆಗೆ ಸಂಭವಿಸುತ್ತಿರುವ ಸರಣಿ ಅಪಘಾತ ತಡೆಗೆ ಕಾರಣ ಹಾಗು ಪರಿಹಾರ ಮಾರ್ಗ ಕಂಡುಕೊಳ್ಳುವಂತೆ ರಾಷ್ಟ್ರೀಯ ಹೆದ್ದಾರಿ ಮುಖ್ಯ ಇಂಜಿನೀಯರ್ ಅಧೀನ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಶಾಸಕ ಸಿಮೆಂಟ್ ಮಂಜು ಅವರು ಇತ್ತೀಚೆಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿ ಹೊಳಿ ಅವರನ್ನು ಭೇಟಿಯಾಗಿ ಹೆದ್ದಾರಿಯಲ್ಲಿ ಸಂಭವಿಸುತ್ತಿರುವ ಅಪಘಾತ ಹಾಗು ಅವ್ಯವಸ್ಥೆ ಕುರಿತು ಗಮನ ಸೆಳೆದಿದ್ದರು.

ಕೆಲವು ದಿನಗಳ ಹಿಂದೆ ಕೆಎಸ್‌ಆರ್‌ಟಿಸಿ ಬಸ್ ಹಾಗು ಖಾಸಗಿ ವಾಹನಗಳು ಅಪಘಾತಕ್ಕೀಡಾಗಿ ಅನಾಹುತ ಸಂಭವಿಸುತ್ತಿವೆ. ಅಪಘಾತ ಪ್ರಮಾಣ ಕಡಿಮೆ ಮಾಡಲು ಅಗತ್ಯ ಕ್ರಮ ಕೈಗೊಳ್ಳ ಬೇಕು. ಸದರಿ ಆಕಾರ, ತಿರುವು ಹಾಗು ಇತರ ಭೌಗೋಳಿಕ ಸವಾಲುಗಳನ್ನು ಗಮನದಲ್ಲಿಟ್ಟುಕೊಂಡು ಕ್ರಮ ಜರುಗಿಸಬೇಕೆಂದು ಶಾಸಕರು ಮನವಿ ಮಾಡಿದ್ದರು.

ಎಚ್ಚರಿಕೆಯ ಫಲಕ ಹಾಗು ಚಿಹ್ನೆ ಅಳವಡಿಸಬೇಕು. ಅಗತ್ಯವಿದ್ದಲ್ಲಿ ವೇಗ ನಿಯಂತ್ರಣ ಕ್ರಮ (ಸ್ಪೀಡ್ ಬ್ರೇಕರ್, ರಂಬಲ್ ಸ್ಟ್ರಿಪ್ಸ್) ಜಾರಿಗೊಳಿಸಬೇಕು. ರಸ್ತೆಯ ದೃಶ್ಯತೆ ಸುಧಾರಣೆಗಾಗಿ ರಿಫ್ಲೆಕ್ಟಿವ್ ಸೂಚಕ ಹಾಗು ಬೆಳಕು ವ್ಯವಸ್ಥೆ ಮಾಡಬೇಕು. ಭಾಗದಲ್ಲಿ ನಿಯಮಿತ ನಿಗಾ ವಹಿಸಿ ಮತ್ತು ಸುಧಾರಣಾ ತಂಡ ನೇಮಿಸಬೇಕೆಂದು ಲೋಕೋಪಯೋಗಿ ಇಲಾಖೆಗೆ ಮನವಿ ಸಲ್ಲಿಸಿ ದ್ದರು. ಈ ಹಿನ್ನಲೆಯಲ್ಲಿ ಸ್ಥಳ ಪರಿಶೀಲಿಸಿ ವರದಿ ಸಲ್ಲಿಸುವಂತೆ ಹೆದ್ದಾರಿ ಮುಖ್ಯ ಇಂಜಿನೀಯರ್ ಆದೇಶಿಸಿದ್ದಾರೆ.



## ಆ.8 ರಂದು ಪ್ರತಿಭಟನೆ

ಬೆಂಗಳೂರು: ಮತದಾರರ ಹಕ್ಕಿನ ರಕ್ಷಣೆ ಮಾಡಬೇಕಾಗಿರುವುದು ರಾಜಕೀಯ ಪಕ್ಷಗಳ ಕರ್ತವ್ಯ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಬುಧವಾರ ಮಾತನಾಡಿದ ಅವರು, ಈ ವಿಚಾರ ಮುಂದಿಟ್ಟುಕೊಂಡು ಆ.8 ಪ್ರತಿಭಟನಾ ಸಮಾವೇಶ ಹಮ್ಮಿಕೊಂಡಿದ್ದೇವೆಂದು ಹೇಳಿದರು.

# ರೈಲ್ವೆ ಕಾಮಗಾರಿ ಶೀಘ್ರವಾಗಿ ಮುಗಿಸಲು ಮನವಿ

• ಪ್ರಜೋದಯ ವರದಿ

**ಹಾಸನ:** ನವದೆಹಲಿಯಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಬುಧವಾರ ಭೇಟಿಯಾದ ಸಂಸದ ಶ್ರೇಯಸ್ ಪಟೇಲ್ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ರೈಲ್ವೆ ನಿಲ್ದಾಣ ಹಾಗು ಹಳಿ ನಿರ್ಮಾಣ ಕಾಮಗಾರಿಗೆ ವೇಗ ನೀಡುವಂತೆ ಮನವಿ ಸಲ್ಲಿಸಿದರು.

ಜಿಲ್ಲೆಯ ಪ್ರಮುಖ ರೈಲ್ವೆ ನಿಲ್ದಾಣಗಳಲ್ಲಿ ರೈಲು ನಿಲುಗಡೆಗೆ ಅವಕಾಶ ಮಾಡಿಕೊಡಬೇಕು. ಹೆಚ್ಚುವರಿ ಪ್ಯಾಸೆಂಜರ್ ರೈಲು ಸಂಚಾರ ಪ್ರಾರಂಭಿಸಬೇಕೆಂದು ಕೋರಿದರು.

ಜೊತೆಗೆ ವಾಣಿಜ್ಯ ಮತ್ತು ಉದ್ಯಮ ಸಚಿವ ಪಿಯೂಷ್ ಗೋಯಲ್‌ರನ್ನು ಭೇಟಿಯಾಗಿ ಸರ್ಫೇಸಿ ಕಾಯ್ದೆ ಯಿಂದ ಕಾಫಿ ಬೆಳೆಯನ್ನು ಹೊರಗಿಡುವಂತೆ ಮನವಿ ಮಾಡಿದರು.






## ಪರೀಕ್ಷಾ ಫಲಿತಾಂಶವಷ್ಟೇ ಎಲ್ಲರ ಗುರಿ | ಮಕ್ಕಳ ಬೌದ್ಧಿಕ ಸಾಮರ್ಥ್ಯ ವೃದ್ಧಿಗೆ ಪೆಟ್ಟು

# ಶನಿವಾರದ ಸಂಭ್ರಮ ಕಸಿದ ಅಧಿಕಾರಿಗಳ ನಿರ್ಲಕ್ಷ್ಯ

• ಪ್ರಜೋದಯ ವರದಿ

**ಹಾಸನ:** ಶಾಲಾ ಮಕ್ಕಳನ್ನು ಪಠ್ಯ ಪುಸ್ತಕ ಅಧ್ಯಯನಕಷ್ಟೇ ಸೀಮಿತಗೊಳಿಸದೆ ಇತರೆ ಚಟುವಟಿಕೆಗಳಲ್ಲೂ ಸಕ್ರಿಯರಾಗಿಸಬೇಕೆಂಬ ಉದ್ದೇಶದಿಂದ ಜಾರಿಗೊಳಿಸಲಾದ ಬ್ಯಾಗ್ ರಹಿತ ಶನಿವಾರ ಸಂಭ್ರಮ ಯೋಜನೆ ಜಿಲ್ಲೆಯಲ್ಲಿ ಘೋಷಣೆಗಷ್ಟೇ ಸೀಮಿತವಾಗಿದೆ.

ಶಾಲೆಗೆ ಬ್ಯಾಗ್ ರಹಿತವಾಗಿ ತೆರಳಿ ಖುಷಿಯಿಂದ ಕಲಿಯುವ ವಾತಾವರಣ ಸೃಷ್ಟಿಸಲು ಪ್ರತಿ ತಿಂಗಳ 3ನೇ ಶನಿವಾರ ಪ್ರಾಥಮಿಕ ಶಾಲಾ ಹಂತದಲ್ಲಿ ಬ್ಯಾಗ್ ರಹಿತ ದಿನ ಅಥವಾ ಸಂಭ್ರಮ ಶನಿವಾರ ಹಮ್ಮಿಕೊಳ್ಳುವಂತೆ ಶಿಕ್ಷಣ ಸಂಶೋಧನಾ ಮತ್ತು ತರಬೇತಿ ಇಲಾಖೆ (ಡಿಎಸ್‌ಇಆರ್‌ಟಿ) ಆದೇಶ ಹೊರಡಿಸಿತ್ತು. ಈ ದಿನದಂದು ಮಕ್ಕಳನ್ನು ಬಹುಮುಖಿ ಚಟುವಟಿಕೆಗಳಲ್ಲಿ ತೊಡಗಿಸುವ ಮೂಲಕ ನಾಗರಿಕ ಪ್ರಜ್ಞೆ ಬೆಳೆಸುವ ಉದ್ದೇಶದಿಂದ ಹತ್ತು ವಿಷಯದ ಕುರಿತು ಸ್ವಯಂ ವಿವರಣಾತ್ಮಕ

» ನಾಲ್ಕನೇ ಪುಟದಲ್ಲಿ



ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಬ್ಯಾಗ್ ರಹಿತ ದಿನ ನಡೆಸಲಾಗುತ್ತಿದೆ. ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಸಂಬಂಧ ನಿಯಮಿತವಾಗಿ ವರದಿ ಸಲ್ಲಿಸುತ್ತಿದ್ದಾರೆ. ಎಲ್ಲಿಯಾದರೂ ಶನಿವಾರ ಸಂಭ್ರಮ ನಿಲ್ಲಿಸಿದ್ದು ಕಂಡುಬಂದರೆ ಅಂತಹ ಶಿಕ್ಷಕರಿಗೆ ಸೂಚನೆ ನೀಡಲಾಗುವುದು.
-ಹೆಚ್.ಎಸ್. ಚಂದ್ರಶೇಖರ್, ಡಿಡಿಪಿಐ

**ಉದ್ದೇಶ ಒಳ್ಳೆಯದು ಅನುಷ್ಠಾನ ಕಷ್ಟ**

ಮಕ್ಕಳ ಬೌದ್ಧಿಕ ಸಾಮರ್ಥ್ಯ ವೃದ್ಧಿ ಹಾಗು ವ್ಯಕ್ತಿತ್ವ ವಿಕಸನ ದೃಷ್ಟಿಯಿಂದ ಬ್ಯಾಗ್ ರಹಿತ ದಿನ ಒಳ್ಳೆಯ ಯೋಜನೆ. ಆದರೆ ಶಾಲಾ ಮಟ್ಟದಲ್ಲಿ ಅನುಷ್ಠಾನ ಕಷ್ಟವಾಗಿದೆ ಎಂದು ನಗರದ ಸರ್ಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರೊಬ್ಬರು ಹೇಳಿದರು.

ಶನಿವಾರ ಸಂಭ್ರಮ ಜಾರಿ ಕುರಿತು ಮಾರ್ಗಸೂಚಿ, ವರದಿ ಸಲ್ಲಿಕೆಗೆ ಇಲಾಖೆ ಸೂಚಿಸಿದೆ. ಅದರಂತೆ ಯಾವುದಾದರೂ ಒಂದು ಚಟುವಟಿಕೆ ನಡೆಸಲಾಗುತ್ತಿದೆಯಾದರೂ ಅದು ಕಾಟಾ ಚಾರಕ್ಕೆ ಎಂಬಂತಾಗಿದೆ. ಫಲಿತಾಂಶ ಉತ್ತಮವಾಗಬೇಕು, ಅದೇ ಸಮಯವನ್ನು ಬೋಧನೆಗೆ ಮೀಸಲಿಡಿ. ಇಂತಹ ಕಾರ್ಯಕ್ರಮಗಳನ್ನೆಲ್ಲ ಮಾಡುತ್ತಾ ಕುಳಿತರೆ ಫಲಿತಾಂಶ ಕುಸಿಯುತ್ತದೆ. ಎಲ್ಲಾ ತರಗತಿ ಮುಗಿದ ಬಳಿಕ ಚಟುವಟಿಕೆ ಮಾಡಿಕೊಳ್ಳಿ ಎನ್ನುತ್ತಾರೆ. ಇಲಾಖೆ ಅಧಿಕಾರಿಗಳೇ ಆಸಕ್ತಿ ತೋರಿಸದ ಹಿನ್ನಲೆಯಲ್ಲಿ ಸುಮ್ಮನಾಗಬೇಕಾಗಿದೆಯೆಂದು ಬೇಸರ ವ್ಯಕ್ತಪಡಿಸಿದರು.

# ಕಾಡು ಹಂದಿಗಳ ದಾಳಿಗೆ ಜೋಳ ನಾಶ



• ಪ್ರಜೋದಯ ವರದಿ

**ಬೇಲೂರು:** ಎಡಬಿಡದ ಮಳೆ ಮತ್ತು ರೋಗ ಬಾಧೆಯ ನಡುವೆ ಕಷ್ಟಪಟ್ಟು ಬೆಳೆದ ಮುಸುಕಿನ ಜೋಳವು ಫಸಲಿಗೆ ಬಂದ ಸಂದರ್ಭದಲ್ಲಿ ಕಾಡು ಹಂದಿಗಳ ಹಿಂಡು ದಾಳಿ ನಡೆಸಿ, ಧ್ವಂಸಗೊಳಿಸಿದ ಘಟನೆ ತಾಲ್ಲೂಕಿನ ಹೆಬ್ಬಾಳು ಗ್ರಾಮದಲ್ಲಿ ನಡೆದಿದೆ.

ತಾಲ್ಲೂಕಿನ ಹೆಬ್ಬಾಳು ಗ್ರಾಮದ ಜಯದೇವಪ್ಪ ಹಾಗೂ ಪರ್ವತೇಗೌಡ ರಿಗೆ ಸೇರಿದ ಆರು ಎಕರೆ ಜಮೀನಿನಲ್ಲಿ ಮುಸುಕಿನ ಜೋಳ ಫಸಲು ಕಟ್ಟುತ್ತಿದ್ದ ಸಂದರ್ಭದಲ್ಲಿ 25ಕ್ಕೂ ಹೆಚ್ಚು ಕಾಡು ಹಂದಿಗಳು ನುಗ್ಗಿ ಜೋಳವನ್ನು ಅರೆ ಬರೆ ತಿನ್ನುವ ಮೂಲಕ ಇಡೀ ಹೊಲ ವನ್ನು ಧ್ವಂಸ ಮಾಡಿವೆ. ಇದರಿಂದಾಗಿ ರೈತನಿಗೆ ದಿಕ್ಕು ತೋಚದಂತಾಗಿದೆ.

ಹಂದಿಗಳು ತಿಂದು ಬಿಟ್ಟ ಜೋಳದ ತೆನೆ ಮತ್ತು ಕಡ್ಡಿಯನ್ನು ಜಾನುವಾರು ಗಳು ಕೂಡ ತಿನ್ನುವುದಿಲ್ಲ. ಕಳೆದ ಎರಡು ತಿಂಗಳಲ್ಲಿ ಹೊಲವನ್ನು ಉಳುಮೆ ಮಾಡಿಸಿ, ದುಬಾರಿ ಬಿತ್ತನೆ ಬೀಜ ಮತ್ತು ರಸಗೊಬ್ಬರ, ಕೂಲಿ ಕಾರ್ಮಿಕರು, ರೋಗಬಾಧೆ ನಡುವೆ ಪೈರು ಅಲ್ಪ-ಸ್ವಲ್ಪ ಚೆನ್ನಾಗಿ ಬಂದಿತ್ತು. ಇದರಿಂದ ಬ್ಯಾಂಕ್ ಸಾಲ ಮತ್ತು ಕೈಸಾಲ ತೀರಿಸಬಹುದು ಎಂಬ ರೈತನ ಲೆಕ್ಕಾಚಾರ ತಪ್ಪಾಗಿದೆ. ಇಡೀ ಹೊಲ ವನ್ನು ಹಂದಿಗಳು ಧ್ವಂಸ ಮಾಡಿದ ಕಾರಣ ರೈತ ಕುಟುಂಬಗಳು ಕಂಗಾಲಾ ಗಿವೆ. ಸಂಬಂಧಪಟ್ಟ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿ ಸೂಕ್ತ ಪರಿ ಹಾರ ಕೊಡಿಸುವ ನಿಟ್ಟಿನಲ್ಲಿ ಕ್ರಮ ವಹಿಸಬೇಕು ಎಂದು ಹೇಳಿದರು.

ಈ ಬಗ್ಗೆ ಪತ್ರಿಕೆಯೊಂದಿಗೆ ಹೆಬ್ಬಾಳು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಜಗದೀಶ್ ಮಾತನಾಡಿ, ಕಾಡು ಹಂದಿಗಳ ಕಾಟ ತಪ್ಪಿಸುವುದಲ್ಲದೆ, ಬೆಳೆ ನಷ್ಟವಾದ ರೈತರಿಗೆ ಸೂಕ್ತ ಪರಿಹಾರ ನೀಡಬೇಕು. ಇಲ್ಲದಿದ್ದರೆ ಪ್ರತಿಭಟನೆ ನಡೆಸಲಾಗು ತ್ತದೆಂದು ಎಚ್ಚರಿಸಿದರು.

# ಜನ ಸ್ಪಂದನ: ಪ್ರಯೋಜನ ಪಡೆಯಿರಿ

## ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೆ ಅರ್ಜಿಗಳಿಗೆ ಶೀಘ್ರ ಸ್ಪಂದಿಸಬೇಕು: ತಹಸೀಲ್ದಾರ್

• ಪ್ರಜೋದಯ ವರದಿ



**ಆಲೂರು:** ಕಂದಾಯ ಸೇರಿದಂತೆ ಹಲವು ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳಿರುವ ಸಾರ್ವಜನಿಕರು ಜನಸ್ಪಂದನ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಸಕಲೇಶಪುರ ಉಪವಿಭಾಗಾಧಿಕಾರಿ ಶೃತಿ ಕರೆ ನೀಡಿದರು.

ಪಟ್ಟಣದ ಮಿನಿ ವಿದಾನಸೌಧ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ತಾಲ್ಲೂಕು ಮಟ್ಟದ ಜನಸ್ಪಂದನ ಕಾರ್ಯ ಕ್ರಮ ಉದ್ಘಾಟಿಸಿ ಮಾತನಾಡಿ, ರಾಜ್ಯ ಸರ್ಕಾರದ ನಿರ್ದೇಶನದಂತೆ ತಿಂಗಳಿಗೆ ಎರಡು ಬಾರಿ ಜನ ಸ್ಪಂದನ ಕಾರ್ಯ ಕ್ರಮ ನಡೆಯಲಿದೆ. ತಾಲ್ಲೂಕು ಮಟ್ಟದಲ್ಲಿ ಗ್ರಾಮೀಣ ಭಾಗದ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ನೀಡಲಾಗುವುದು ಎಂದರು.

ತಹಶೀಲ್ದಾರ್ ಮಲ್ಲಿಕಾರ್ಜುನ್ ರವರು ಮಾತನಾಡಿ, ಜನಸಾಮಾ ನ್ಯರು ತಮ್ಮ ಸಮಸ್ಯೆಗಳ ಬಗ್ಗೆ ನೀಡಿದ ಅರ್ಜಿಗಳನ್ನು ಸಂಬಂಧಿಸಿದ ಅಧಿಕಾರಿ ಗಳು ನಿರ್ಲಕ್ಷ್ಯ ವಹಿಸದೆ ಶೀಘ್ರ ಸ್ಪಂದಿಸಬೇಕು. ಜನಸ್ಪಂದನ ಸಭೆಗಳು ಜನರಿಗೆ ಸಹಕಾರಿಯಾಗಬೇಕು. ಸಾರ್ವಜನಿಕರ ಕೆಲವು ಸಣ್ಣ-ಪುಟ್ಟ ಸಮಸ್ಯೆಗಳಾದ ಖಾತೆ ಬದಲಾವಣೆ, ಹಕ್ಕುಪತ್ರ ವಿತರಣೆ, ಪ್ರಮಾಣ ಪತ್ರ ಸೇರಿದಂತೆ ಮತ್ತಿತರ ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸಬೇಕು. ಹಣಕಾಸಿನ ಅವಶ್ಯವಿರುವ ಸಮಸ್ಯೆಗಳನ್ನು ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ದಾಗ ಸರ್ಕಾರದ ಮಟ್ಟದಲ್ಲಿ ಅವು ಗಳನ್ನು ಇತ್ಯರ್ಥಪಡಿಸಲಾಗುವುದು. ಜನರ ದೈನಂದಿನ ಸಮಸ್ಯೆಗಳ ಅರ್ಜಿಗಳನ್ನು ಸ್ಥಳೀಯ ಹಂತದಲ್ಲಿ ಪರಿಹರಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಬಸ್ ಸೌಲಭ್ಯ, ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಶುಶ್ರೂಷಕಿ ನೇಮಿಸುವುದು, ವಿದ್ಯುತ್ ಸಂಪರ್ಕ ಕಲ್ಪಿಸುವುದು, ಅಪಾಯಕಾರಿ ಮರಗಳನ್ನು ತೆರವು, ರಸ್ತೆ ದುರಸ್ತಿ, ನೀರಿನ ಸೌಲಭ್ಯ, ಸರ್ಕಾರಿ ಸ್ಥಳ ಅತಿಕ್ರಮಣ, ಕಟ್ಟಡಗಳ ಸಕ್ರಮ, ಖಾತೆ ಬದಲಾವಣೆ, 94 ಸಿ ಹಾಗು ಬಗರ್ ಹುಕಂನಲ್ಲಿ ಅರ್ಜಿ ಸಲ್ಲಿಸಿರುವ ರೈತರಿಗೆ ಹಕ್ಕುಪತ್ರ ಮತ್ತು ಸಾಗುವಳಿ ಚೀಟಿ ವಿತರಣೆ ಸೇರಿದಂತೆ ಸುಮಾರು 47 ಅಹವಾಲುಗಳು ಸಲ್ಲಿಕೆಯಾಗಿದ್ದವು.

ಸಭೆಯಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ. ನಿಸಾರ್ ಫಾತೀಮಾ, ಕ್ಷೇತ್ರ ಶಿಕ್ಷಣಾಧಿಕಾರಿ ಎ. ಜೆ. ಕೃಷ್ಣೇಗೌಡ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಹಾಯಕ ನಿರ್ದೇಶಕ ರಮೇಶ್, ಸಬ್‌ಇನ್ಸ್ಪೆಕ್ಟರ್ ಪ್ರವೀಣ್ ಕುಮಾರ್ ಹಾಜರಿದ್ದರು.

### ಕರ್ತವ್ಯ ಭವನ ಲೋಕಾರ್ಪಣೆ

ನವದೆಹಲಿ: ರಾಷ್ಟ್ರ ರಾಜಧಾನಿ ನವದೆಹಲಿಯ ಪ್ರಮುಖ ಸಚಿವಾಲ ಯಗಳನ್ನು ಹೊಂದಿರುವ ಹತ್ತು ಹೊಸ ಕಟ್ಟಡಗಳಲ್ಲಿ ಮೊದಲನೆಯ ದಾದ ಕರ್ತವ್ಯಭವನವನ್ನು ಪ್ರಧಾನಿ ನರೇಂದ್ರಮೋದಿ ಅವರು ಲೋಕಾ ರ್ಪಣೆ ಮಾಡಿದರು.

ಮುಂದಿನ ಎರಡು ವರ್ಷಗಳಲ್ಲಿ 10 ಕರ್ತವ್ಯಭವನಗಳನ್ನು ಪೂರ್ಣ ಗೊಳಿಸುವ ಉದ್ದೇಶವನ್ನು ಕೇಂದ್ರ ಸರ್ಕಾರ ಹೊಂದಿದೆ.

# ತಾಯಿಮುದ್ದು ಹಗರೆ ಗ್ರಾಪಂ ಅಧ್ಯಕ್ಷೆ



• ಪ್ರಜೋದಯ ವರದಿ

**ಹಗರೆ:** ಮಾದೀಹಳ್ಳಿ ಹೋಬಳಿ ಹಗರೆ ಗ್ರಾಪಂ ಅಧ್ಯಕ್ಷರಾಗಿ ಸಿಳ್ಳೆಕ್ಯಾತ ಜನಾಂಗದ ತಾಯಿಮುದ್ದು ಕೃಷ್ಣಪ್ಪ ಅವಿರೋಧವಾಗಿ ಆಯ್ಕೆಯಾದರು.

ಒಂದು ತಿಂಗಳ ಹಿಂದೆ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಬುಧವಾರ ಚುನಾ ವಣೆ ನಡೆಸಲಾಯಿತು. ಒಟ್ಟು 20 ಸದಸ್ಯರಿರುವ ಗ್ರಾಮ ಪಂಚಾಯಿ ತಿಯಲ್ಲಿ ಇವರು ಹೊರತು ಪಡಿಸಿ ಬೇರೆ ಯಾರು ನಾಮ ಪತ್ರ ಸಲ್ಲಿಸದ ಕಾರಣ ತಾಯಿಮುದ್ದು ಕೃಷ್ಣಪ್ಪರವ ರನ್ನು ಅವಿರೋದವಾಗಿ ಆಯ್ಕೆ ಮಾಡ ಲಾಗಿದೆ ಎಂದು ಚುನಾವಣಾ ಧಿಕಾರಿ ವಸಂತಕುಮಾರ್ ಘೋಷಿಸಿದರು.

ಒಟ್ಟು ಇಪ್ಪತ್ತು ಸದಸ್ಯರಿರುವ ಗ್ರಾಮ ಪಂಚಾಯಿತಿಯಲ್ಲಿ 12 ಸದಸ್ಯರು ಮಾತ್ರ ಚುನಾವಣೆ ಪ್ರಕ್ರಿ ಯೆಯಲ್ಲಿ ಭಾಗವಹಿಸಿದ್ದರು.

ನೂತನ ಅಧ್ಯಕ್ಷರಿಗೆ ಶುಭ ಕೋರಿ ಮಾತನಾಡಿದ ತಾಲ್ಲೂಕು ಬಿಜೆಪಿ ಮುಖಂಡ ಡಿಶಾಂತಕುಮಾರ್, ಬುಡಕಟ್ಟು ಜನಾಂಗದ ಸಿಳ್ಳೆಕ್ಯಾತ ಸಮುದಾಯಕ್ಕೆ ಸೇರಿದ ಮಹಿಳೆ ತಾಯಿಮುದ್ದು ಕೃಷ್ಣಪ್ಪನವರು ಸದಸ್ಯರ ಬೆಂಬಲ ದಿಂದ ಶಾಸಕರ ಮಾರ್ಗದರ್ಶನದಂತೆ ಅಧ್ಯಕ್ಷರಾಗಿದ್ದಾರೆ ಎಂದರು.

ಚುನಾವಣಾಧಿಕಾರಿಯಾಗಿ ತಾಲ್ಲೂಕು ಮುಖ್ಯ ಕಾರ್ಯ ನಿರ್ವಾಹಣಾಧಿ ಕಾರಿ ವಸಂತ್‌ಕುಮಾರ್, ಪಿಡಿಒ ಹೊಳೆಯಯ್ಯ, ಹಾಜರಿದ್ದರು.

ನೂತನ ಅಧ್ಯಕ್ಷರಿಗೆ ಸದಸ್ಯರಾದ ಮಂಜುನಾಥ್, ಪ್ರಭ ಮಹೇಶ್, ಪುಷ್ಪ ಹರೀಶ್, ಜಯಮ್ಮ ರಾಜ್ ಕುಮಾರ್, ಪಾಮತಿ ಅನಿಲ್, ಲಕ್ಷ್ಮಮ್ಮ, ಸವಾಸಿಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಶೇಖರ್‌ಗೌಡ, ಹಗರೆ ಕೃಷಿಪತ್ತಿನ ಸಹಕಾರ ಸಂಘದ ಸದಸ್ಯ ಸಂಕೇತ್, ರಘು, ಗೋಪಿ, ಶ್ರೀನಿವಾಸ್, ಇಂತಿಯಾಸ್ ಖಾನ್, ದರ್ಶನ್, ನವೀನ್ ಇತರರು ಶುಭಾಷಯ ಕೋರಿದರು.

# ದೇಗುಲ-ಶಾಲೆಗಳ ನಿರ್ಮಾಣ ಅಗತ್ಯ

## ದೇಗುಲಗಳ ಲೋಕಾರ್ಪಣೆ- ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಶಾಸಕ ಸಿ.ಎನ್.ಬಾಲಕೃಷ್ಣ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಭಾರತದ ಸಂಸ್ಕೃತಿಯು ಸನಾತನ ಹಿಂದೂ ಧರ್ಮದ ತಳಹದಿಯ ಮೇಲೆ ನಿಂತಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಸೋರೆಕಾಯಿಪುರ ಗ್ರಾಮದಲ್ಲಿ ಜೀರ್ಣೋದ್ಧಾರ ಗೊಂಡಿರುವ ಶ್ರೀ ಮಲ್ಲಿಗಮ್ಮ, ಶ್ರೀ ದುರ್ಗಮ್ಮ, ಶ್ರೀ ಮುನೇಶ್ವರ ಹಾಗೂ ಶ್ರೀ ಮಾರಿಯಮ್ಮ ದೇವಿಯ ದೇಗುಲಗಳ ಲೋಕಾರ್ಪಣೆ ಹಾಗೂ ದೇವರ ಪ್ರಾಣ ಪ್ರತಿಷ್ಠಾಪನಾ ಕಾರ್ಯ ಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರತಿ ಗ್ರಾಮಗಳಲ್ಲಿಯೂ ದೇಗುಲ ಹಾಗೂ ಶಾಲೆಗಳು ಇರಬೇಕು. ದೇಗುಲದ ಗಂಟೆ ಹಾಗೂ ಶಾಲೆಯ ಗಂಟೆ ಶಬ್ದ ಪ್ರತಿ ದಿನಗಳಲ್ಲಿಯೂ ಮೊಳಗಬೇಕು. ಶಾಲೆಯಿಂದ ಶಿಕ್ಷಣ ಮತ್ತು ದೇಗುಲಗಳಿಂದ ಧರ್ಮ, ಸಂಸ್ಕೃತಿ ಹಾಗೂ ಉತ್ತಮ ಸಂಸ್ಕಾರ ಬೆಳೆಯುತ್ತದೆ. ಇತ್ತೀಚಿನ ವರ್ಷ ಗಳಿಂದ ತಾಲ್ಲೂಕಿನಾದ್ಯಂತ ಬಹುತೇಕ ದೇಗುಲಗಳು ಜೀರ್ಣೋದ್ಧಾರ ದೊಂದಿಗೆ ಲೋಕಾರ್ಪಣೆಗೊಂಡಿವೆ. ದೇಗುಲಗಳ ನಿರ್ಮಾಣಕ್ಕೆ ಶಾಸಕರ ನಿಧಿಯಿಂದ ಅನುದಾನ ಹಾಗೂ ವೈಯಕ್ತಿಕವಾಗಿ ಸಾಕಷ್ಟು ದೇಣಿಗೆ ನೀಡಲಾಗಿದೆ ಎಂದು ತಿಳಿಸಿದರು.

**ಧಾರ್ಮಿಕ ಕಾರ್ಯಕ್ರಮಗಳು:** ದೇಗುಲಗಳ ಲೋಕಾರ್ಪಣೆ ಹಿನ್ನೆಲೆ ಮುಂಜಾನೆಯೇ ದೇವಾಲಯಗಳಿಗೆ ಹಸಿರು ಚಪ್ಪರ ಹಾಕಲಾಗಿದ್ದು ತಳಿರು- ತೋರಣಗಳಿಂದ ಸಿಂಗರಿಸ ಲಾಗಿತ್ತು. ಮೊದಲಿಗೆ ವಿಘ್ನೇಶ್ವರ ಹಾಗೂ ಗಂಗಾ ಪೂಜೆ ನೆರವೇರಿತು. ಗೋಪೂಜೆ ನಂತರ ನಂತರ ದುರ್ಗಾ ಹೋಮ, ಮೃತ್ಯುಂಜಯ ಹೋಮ, ವೀರಭದ್ರೇಶ್ವರ ಸಮೇತ ವೀರಗಾಸೆ ಯೊಂದಿಗೆ ಕುಂಭ ಕಳಸರಾದನೆ ಬಳಿಕ ಮಲ್ಲಿಗೆಮ್ಮ ದೇವಾಲಯ ಪ್ರವೇಶ ಮತ್ತು ಬಿಂಬ ಸೋಮ ಕ್ಷಯನವಾಸ ಹಾಗೂ ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳು ನೆರವೇರಿದವು. ಕಲಶ ಉತ್ಸವದಲ್ಲಿ ವೀರಗಾಸೆ ಕುಣಿತವು ನೋಡುಗರ ಗಮನ ಸೆಳೆಯಿತು.

ಗ್ರಾಮ ಪಂಚಾಯಿತಿ ಸದಸ್ಯೆ ರಾಣಿ, ಮಾಜಿ ಅಧ್ಯಕ್ಷ ಚಂದ್ರು, ಜಿಕೆವಿಕೆಯ ನಿವೃತ್ತ ಅಧಿಕಾರಿ ಮತಿಘಟ್ಟ ದೇವರಾಜು, ದೇವಸ್ಥಾನದ ವ್ಯವಸ್ಥಾಪಕರಾದ ಮೇಗಲಮನೆ ನಂಜುಂಡೇಗೌಡ ಮತ್ತು ಪುಟ್ಟಸ್ವಾಮಿ ಗೌಡ, ಪ್ರಮುಖರಾದ ಚೇತನ್, ಪಟೇಲ್ ಸಣ್ಣತಮ್ಮೇಗೌಡ, ಸೋರೆ ಕಾಯಿಪುರ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ಪಾಲ್ಗೊಂಡಿದ್ದರು.



**ಹಾಸನ: ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ದಂಡಿಗನಹಳ್ಳಿ ಕುಂದೂರು ಮಠ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿನಿಗಳಾದ ಸ್ಫೂರ್ತಿ ಸಿ.ಹೆಚ್ ಕಿಕ್ ಬಾಕ್ಸಿಂಗ್‌ನಲ್ಲಿ ಹಾಗೂ ಆರ್ಯ ಕೆ.ಬಿ ಮತ್ತು ಸಂಧ್ಯಾ ಕೆ.ಆರ್ ರವರು ಅಥ್ಲೆಟಿಕ್ಸ್ ನಲ್ಲಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.**
**ಆಯ್ಕೆಯಾದ ವಿದ್ಯಾರ್ಥಿನಿಯರನ್ನು ಕ್ಷೇತ್ರ ಶಿಕ್ಷಣಾಧಿಕಾರಿ ದೀಪ ಹೆಚ್.ಎನ್ ಹಾಗೂ ವಸತಿ ಶಾಲೆಯ ಪ್ರಾಂಶುಪಾಲರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಶಿಕ್ಷಕರ ಸಂಘದ ಪದಾಧಿಕಾರಿಗಳು ಅಭಿನಂದಿಸಿದರು.**

# ರೆಪೊ ದರದಲ್ಲಿ ಬದಲಾವಣೆ ಇಲ್ಲ

ಮುಂಬೈ: ಭಾರತೀಯ ರಿಸರ್ವ್ ಬ್ಯಾಂಕ್ ಬುಧವಾರ ರೆಪೊ ದರವನ್ನು 5.5% ರಲ್ಲಿ ಸ್ಥಿರವಾಗಿರಿಸಿದೆ. ಭಾರತದ ಆರ್ಥಿಕ ದೃಷ್ಟಿಕೋನದ ಬಗ್ಗೆ ಆಶಾವಾದ ಬೆಳೆಯುತ್ತಿದ್ದರೂ ಕಾಯುವ ಮತ್ತು ನೋಡುವ ವಿಧಾನವನ್ನು ಸೂಚಿಸುತ್ತದೆ.

ಮಾನಿಟರಿ ಪಾಲಿಸಿ ಕಮಿಟಿ (ಎಂಪಿಸಿ) ಸಭೆಯ ನಂತರ ನಿರ್ಧಾರವನ್ನು ಪ್ರಕಟಿಸಿದ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ, ಕೇಂದ್ರ ಬ್ಯಾಂಕ್ ಸದ್ಯಕ್ಕೆ ತಟಸ್ಥ ನಿಲುವನ್ನು ಮುಂದುವರಿಸುತ್ತದೆ. ಮಾನಿಟರಿ ಪಾಲಿಸಿ ಕಮಿಟಿಯು ಪಾಲಿಸಿ ರೆಪೊ ದರವನ್ನು 5.5% ರಲ್ಲಿ ಬದಲಾಗದೆ ಇಡಲು ನಿರ್ಧರಿಸಿದೆ ಎಂದು ಹೇಳಿದರು.



# ಜೆಜೆಎಂ ಕಾಮಗಾರಿ ಪರಿಶೀಲಿಸಿದ ಜಿಪಂ ಸಿಇಒ

ಹಾಸನ: ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಬಿ.ಆರ್ ಪೂರ್ಣಿಮಾ ಅವರು ಚನ್ನರಾಯಪಟ್ಟಣ ತಾಲ್ಲೂಕು ನುಗ್ಗೆಹಳ್ಳಿ ಹೋಬಳಿಯ ಅಕ್ಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೆಬ್ಬಾಳಲು, ಅಕ್ಕನಹಳ್ಳಿ, ಶೆಟ್ಟಿಹಳ್ಳಿ, ಎಂ ದಾಸಪುರ ಗ್ರಾಮಗಳು ಹಾಗೂ ಜಂಬೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುದ್ದನಹಳ್ಳಿ ಕಾರೆಕೆರೆ ಗ್ರಾಮಗಳು ಮತ್ತು ಶ್ರವಣಬೆಳಗೊಳ ಹೋಬಳಿಯ ಗೌಡಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊಸೂರು ಗ್ರಾಮಗಳಿಗೆ ಭೇಟಿ ನೀಡಿ ಜೆಜೆಎಂ ಕಾಮಗಾರಿಗಳನ್ನು ಪರಿಶೀಲಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

# ಧಾರ್ಮಿಕ ಕಾರ್ಯಗಳಿಂದ ಮನಸ್ಸಿಗೆ ನೆಮ್ಮದಿ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಧಾರ್ಮಿಕ ಕಾರ್ಯಗಳಲ್ಲಿ ತೊಡಗುವುದರಿಂದ ಮನಸ್ಸಿಗೆ ಶಾಂತಿ ಹಾಗೂ ನೆಮ್ಮದಿ ಸಿಗಲಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಅವರು ಹೇಳಿದರು.

ತಾಲ್ಲೂಕಿನ ಮುದ್ದನಹಳ್ಳಿ ಗ್ರಾಮ ದಲ್ಲಿ ನೆರವೇರಿದ ಶ್ರೀ ಚಿಕ್ಕಮ್ಮದೇವಿ ದೇವಾಲಯ ಲೋಕಾರ್ಪಣೆ, ವಿಗ್ರಹ ಪ್ರತಿಷ್ಠಾಪನೆ ಹಾಗೂ ವಿಮಾನ ಗೋಪುರ ಕಳಸಾರೋಹಣ ಮತ್ತು ಧಾರ್ಮಿಕ ಕಾರ್ಯಕ್ರಮದಲ್ಲಿ ಮಾತ ನಾಡಿದ ಅವರು, ದೇವಾಲಯ ನಿರ್ಮಾಣ ಹಾಗೂ ಪ್ರತಿದಿನ ಪೂಜೆ ನಡೆಸುವುದರ ಜೊತೆಯಲ್ಲಿ ಸ್ವಚ್ಛತೆಗೂ ಹೆಚ್ಚಿನ ಆದ್ಯತೆ ನೀಡಬೇಕು. ಅದರಿಂದ ಭಕ್ತರಲ್ಲಿ ಭಕ್ತಿ ಭಾವನೆ ಹೆಚ್ಚಾಗಲಿದೆ. ಗ್ರಾಮದಲ್ಲಿ ರಸ್ತೆ, ಕುಡಿಯುವ ನೀರು ಹಾಗೂ ಡೈರಿ ಕಟ್ಟಡಕ್ಕೆ ಅನುದಾನ ಸೇರಿ ವಿವಿಧ ಅಭಿವೃದ್ಧಿ ಕೆಲಸಗಳಿಗೆ ಈಗಾಗಲೇ ಹೆಚ್ಚಿನ ಅನುದಾನ ನೀಡ ಲಾಗಿದೆ ಎಂದು ತಿಳಿಸಿದರು.

ಸಂಸದ ಶ್ರೇಯಸ್ ಎಂ.ಪಟೇಲ್ ಅವರು ಮಾತನಾಡಿ, ಗ್ರಾಮಸ್ಥರೆಲ್ಲರೂ ಒಗ್ಗಟ್ಟಿನಿಂದ ದೇವಾಲಯ ನಿರ್ಮಾಣ ಮಾಡಿದ್ದಾರೆ. ಮುಂಬರುವ ದಿನಗಳಲ್ಲಿ ದೇವಾಲಯದ ಅಭಿವೃದ್ಧಿ ಕೆಲಸಗಳಿಗೆ ಅಗತ್ಯ ಅನುದಾನ ಕಲ್ಪಿಸಲಾಗುವು ದೆಂದು ಭರವಸೆ ನೀಡಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ ಅವರು ಮಾತನಾಡಿದರು. ನೂತನ ದೇವಾ ಲಯ ಲೋಕಾರ್ಪಣೆ ಅಂಗವಾಗಿ ಭಾನುವಾರ ಜಿಲ್ಲೆಯಲ್ಲೇ ಇದೆ ಮೊದಲ ಬಾರಿಗೆ ಗ್ರಾಮದಲ್ಲಿ ಶ್ವಾನಗಳ ಓಟದ ಸ್ಪರ್ಧೆ ಏರ್ಪಡಿಸಲಾಗಿತ್ತು. ಗ್ರಾಮದ ಸರ್ಕಾರಿ ಶಾಲೆಯ ಮಕ್ಕ ಳಿಂದ ಭರತನಾಟ್ಯ ಸೇರಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು.

**ಧಾರ್ಮಿಕ ಕಾರ್ಯಕ್ರಮಗಳು:** ಮುಂಜಾನೆಯೇ ದೇಗುಲಕ್ಕೆ ಹಸಿರು ಚಪ್ಪರ ಹಾಕಲಾಗಿದ್ದು, ವಿಘ್ನೇಶ್ವರ ಮತ್ತು ಗಂಗೆ ಪೂಜೆ, ಗೋಪೂಜೆ, ನವ ಗ್ರಹ ಹೋಮ, ಗಣ ಹೋಮ, ಪೂರ್ಣಾಹುತಿ ಬಳಿಕ ಮಹಾ ಮಂಗ ಳಾರತಿ ನೆರವೇರಿತು. ಅನ್ನದಾಸೋಹ ನಡೆಯಿತು.

ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎ.ಸಿ.ಆನಂದ್ ಕುಮಾರ್, ಪುರಸಭಾ ಮಾಜಿ ಅಧ್ಯಕ್ಷರಾದ ಶಶಿ ಧರ್, ರವೀಶ್(ಕಡ್ಡಿಪುಡಿ), ಮುಖಂಡ ರಾದ ಕಾರೇಕೆರೆ ಪ್ರಕಾಶ್, ಕುಮಾರ್, ಶಿಕ್ಷಕರಾದ ಭಾಗ್ಯಮ್ಮ, ರೇವಣ್ಣ ಸ್ವಾಮಿ ಹಾಗೂ ಗ್ರಾಮಸ್ಥರು ಈ ಸಂದರ್ಭ ದಲ್ಲಿ ಹಾಜರಿದ್ದರು.

# ಹೇಮಾವತಿ ನಾಲೆಯಲ್ಲಿ ಮೃತದೇಹ ಪತ್ತೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ಆಕಸ್ಮಿಕವಾಗಿ ಹೇಮಾವತಿ ನಾಲೆಗೆ ಬಿದ್ದಿದ್ದ ವ್ಯಕ್ತಿಯ ಮೃತದೇಹ ಮೂರು ದಿನಗಳ ಬಳಿಕ ತಾಲ್ಲೂಕಿನ ಜಾಂದಾಳ್-ಹರಿಹರಪುರ ರಸ್ತೆಯ ನಾಲೆಯಲ್ಲಿ ಬುಧವಾರ ಪತ್ತೆಯಾಗಿದೆ.

ತಾಲ್ಲೂಕಿನ ಸಿಗರನಹಳ್ಳಿ ಗ್ರಾಮದ ಕುಮಾರ್ (60) ಮೃತರು. ಸೋಮವಾರ ಮಧ್ಯಾಹ್ನ ಕುಮಾರ್ ನಾಲೆಗೆ ಬಿದ್ದಿದ್ದರು. ಕುಟುಂಬಸ್ಥರು ಎಷ್ಟೇ ಹುಡುಕಾಡಿದರೂ ಕುಮಾರ್ ಅವರ ಸುಳಿವು ಸಿಕ್ಕಿರಲಿಲ್ಲ.

ಕುಟುಂಬಸ್ಥರು ಪೊಲೀಸರು ಮತ್ತು ಅಗ್ನಿ ಶಾಮಕ ದಳಕ್ಕೆ ದೂರು ನೀಡಿದ ಮೇರೆಗೆ ಮಂಗಳವಾರ ದೊಡ್ಡಕುಂಚೇವು ಕೆರೆಯಲ್ಲಿ ಹುಡು ಕಾಟ ನಡೆಸಿದ ಅಗ್ನಿ ಶಾಮಕ ಸಿಬ್ಬಂದಿ ಮೃತದೇಹ ಸಿಗದೆ ವಾಪಾಸ್ ಹೋಗಿದ್ದರು. ನಾಲೆಯಲ್ಲಿ ಭಾರೀ ಪ್ರಮಾಣದಲ್ಲಿ ನೀರು ಹರಿಯುತ್ತಿದ್ದು, ಶವ ಹುಡುಕಾಟ ಕಷ್ಟವಾಗಿತ್ತು.

ನೀರು ನಿಲ್ಲಿಸಲು ಹೇಮಾವತಿ ಜಲಾಶಯ ಯೋಜನೆ ಅಧಿಕಾರಿಗಳು ನಿರಾಕರಿಸಿದ್ದರು. ನಂತರ ಜಿಲ್ಲಾಧಿಕಾರಿ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವ ಮೂಲಕ ಮೃತದೇಹ ಹುಡುಕಲು ಸಹಕಾರ ನೀಡಬೇಕೆಂದು ಸ್ಥಳೀಯರು ಮನವಿ ಮಾಡಿದ್ದರು.

ಅಗ್ನಿಶಾಮಕ ಠಾಣೆಯ ಉಮಾ ಮಹೇಶ್, ರೇವಣ್ಣ, ರಂಗಸ್ವಾಮಿ, ರೋಹಿತ್ ಕಾರ್ಯಾಚರಣೆ ಮೂಲಕ ಮೃತ ದೇಹ ಹೊರ ತೆಗೆದರು. ಕುಟುಂಬ ಸದಸ್ಯರ ಆಕ್ರಂದನ ಮುಗಿಲು ಮುಟ್ಟಿತ್ತು.

# ಮುಂದಿನ ಮೂರು ದಿನ ಧಾರಾಕಾರ ಮಳೆ

ಬೆಂಗಳೂರು: ಕರ್ನಾಟಕದ ಬಹುತೇಕ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನಗಳು ಹೆಚ್ಚಿನ ಮಳೆಯಾಗಲಿದೆ. ದಕ್ಷಿಣ ಕನ್ನಡ, ಉಡುಪಿ, ಬಾಗಲ ಕೋಟೆ, ಕೊಪ್ಪಳ, ಹಾಸನ, ಕೊಡಗಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ವಿಜಯನಗರ, ರಾಮನಗರ, ಮೈಸೂರು, ದಾವಣಗೆರೆ, ಚಿಕ್ಕಮಗಳೂರು, ಶಿವ ಮೊಗ್ಗ, ದಾವಣಗೆರೆ, ಚಿಕ್ಕಮಗ ಳೂರು, ಚಾಮರಾಜನಗರ, ಯಾದ ಗಿರಿ, ರಾಯಚೂರು, ಕಲಬುರಗಿ, ಹಾವೇರಿ, ಧಾರವಾಡ, ಬೆಳಗಾವಿ, ಉತ್ತರ ಕನ್ನಡ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರ್ನಾಟಕದ 19 ಜಿಲ್ಲೆಗಳಲ್ಲಿ ಮುಂದಿನ ಮೂರು ದಿನ ಧಾರಾಕಾರ ಮಳೆಯಾಗಲಿದೆ.

# ಅಮ್ಮನಹಳ್ಳದಲ್ಲಿ ಭಕ್ತರಿಂದ ಗಂಗಾಪೂಜೆ

• ಪ್ರಜೋದಯ ವರದಿ

**ಹಾರನಹಳ್ಳಿ:** ಇಲ್ಲಿಗೆ ಸಮೀಪದ ಕೊಡಮ್ಮ ದೇವಿ ಮೂಲ ಸನ್ನಿಧಿ ಅಮ್ಮನ ಹಳ್ಳದಲ್ಲಿ ಶ್ರಾವಣ ಮಾಸದ ಅಂಗವಾಗಿ ಗಂಗಾ ಪೂಜೆ ಕಾರ್ಯ ಕ್ರಮ ಸುವಾಸಿನಿಯರಿಂದ ಭಕ್ತರು ಗಳಿಂದ ವೈಭವದಿಂದ ನಡೆಯಿತು

ಶ್ರೀ ಕೊಡಮ್ಮದೇವಿ ಶ್ರೀ ದೂತ ರಾಯಸ್ವಾಮಿ ಶ್ರೀ ವೀರಭದ್ರಸ್ವಾಮಿ ಶ್ರೀ ಕೆಂಚರಾಯಸ್ವಾಮಿ ಅವರಿಗೆ ವಿಶೇಷ ಹೂವಿನಿಂದ ಶೃಂಗಾರ ಮಾಡಿ ಹಳ್ಳದ ಸಮೀಪ ದೇವರುಗಳನ್ನು ಗದ್ದಿಗೆ ಮಾಡಿದ ನಂತರ ಅಮ್ಮನ ಹಳ್ಳದ ಗಂಗೆಗೆ ಗಂಗಾ ಪೂಜೆಯನ್ನು ಮಹಿಳೆಯರು ಮಂಗಳ ದ್ರವ್ಯಗಳಿಂದ ಪೂಜಿಸಿದ ನಂತರ ಮಹಾಮಂಗಳಾ ರತಿ ನಡೆಯಿತು.

ನಂತರ ಶ್ರೀ ದೂತರಾಯ ಸ್ವಾಮಿಯವರ ತಲೆಯ ಮೇಲೆ ಕೊಟ್ಟು ಪೂಜೆ ಸಲ್ಲಿಸಿ ಧೂತರಾಯ ಸ್ವಾಮಿ ಸೋಮನ ಕುಣಿತ ಆಕರ್ಷಣೆ ಯಾಗಿದ್ದು ಅರೆ ವಾದ್ಯ ದೇವರ ಕುಣಿತಕ್ಕೆ ಮೆರುಗು ನೀಡಿತ್ತು. ಈ ಭಾಗದ ಭಕ್ತರು ಉತ್ತಮ ಮಳೆ ಬೆಳೆಯಾಗಲಿ ಎಂದು ಶ್ರೀದೇವಿ ಯವರನ್ನ ಪ್ರಾರ್ಥಿಸಲಾಯಿತು.



ಹಾರನಹಳ್ಳಿ ಗ್ರಾಮಸ್ಥರು ದೇವಿಯ ಭಕ್ತರು ಅಮ್ಮನಹಳ್ಳ ಪೂಜಾ ಕಾರ್ಯ ಕ್ರಮದಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದು ಧನ್ಯರಾದರು.

# ಸಹಕಾರ ಸಂಘಗಳಲ್ಲಿ ಪಾರದರ್ಶಕತೆ ಅಗತ್ಯ



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಯಾವುದೇ ಸಂಘ ಸಂಸ್ಥೆಗಳಿರಲಿ ಪಾರದರ್ಶಕ ವ್ಯವಹಾರ ಹೊಂದಿದ್ದಲ್ಲಿ ಪ್ರಗತಿ ಕಾಣಲು ಸಾಧ್ಯ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಮತಿಘಟ್ಟ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಅವಿ ರೋಧವಾಗಿ ಆಯ್ಕೆಯಾದ ಸಬ್ಬನಹಳ್ಳಿ ಗಂಗಾಧರ್ ಅವರನ್ನು ಬುಧವಾರ ಅಭಿನಂದಿಸಿ ಮಾತನಾಡಿ, ವ್ಯವಹಾರ ದಲ್ಲಿ ನಂಬಿಕೆ ಹಾಗೂ ವಿಶ್ವಾಸವು ಪ್ರಮುಖ ಪಾತ್ರ ವಹಿಸಲಿದೆ ಎಂದರು.

ಕೃಷಿ ಸಾಲ ಸೌಲಭ್ಯ ಕಲ್ಪಿಸಲಾಗಿದೆ. ಅಲ್ಲದೆ ಸ್ವಸಹಾಯ ಸಂಘಗಳಿಗೂ ಕಡಿಮೆ ಬಡ್ಡಿ ದರದಲ್ಲಿ ಸಾಲ ಒದಗಿಸ ಲಾಗಿದೆ. ಕೇವಲ 10 ಗುಂಟೆ ಕೃಷಿ ಜಮೀನು ಹೊಂದಿರುವ ರೈತರಿಗೂ ಸಹ ಸಾಲ ನೀಡುವ ವ್ಯವಸ್ಥೆ ಮಾಡಲಾಗಿದೆ. ಬಹುತೇಕ ಸಂಘಗಳ ಮೂಲಕ ಪಹಣಿ ವಿತರಣೆಗೂ ಅವಕಾಶ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಇನ್ನು ಸಂಕಷ್ಟದಲ್ಲಿದ್ದ ರೈತರಿಗೆ ಹೈನುಗಾರಿಕೆ ವರವಾಗಿ ಪರಿಣಮಿಸಿದೆ. ಇಂದು ತಾಲ್ಲೂಕಿನ ಪ್ರತಿ ಕುಟುಂಬಗಳು ಹೈನುಗಾರಿಕೆಯಲ್ಲಿ ತೊಡಗುವ ಮೂಲಕ ತಮ್ಮ ಬದುಕನ್ನು ಆರ್ಥಿಕವಾಗಿ ಸದೃಢ ಗೊಳಿಸಿಕೊಂಡಿ ರುವುದು ವಿಶೇಷ ಸಂಗತಿ ಎಂದರು.

ಅಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದ ಸಬ್ಬನಹಳ್ಳಿ, ಗಂಗಾ ಧರ್ ಅವರನ್ನು ಶಾಸಕರು ಹಾಗೂ ಸಂಘದ ವತಿಯಿಂದ ಅಭಿನಂದಿಸಲಾ ಯಿತು. ಮಾಜಿ ಅಧ್ಯಕ್ಷರಾದ ಎ.ಜಿ. ಪ್ರಭಾಕರ್, ಶ್ರೀಕಂಠೇಗೌಡ, ಗಿರೀಶ್, ಕಾಂತರಾಜ್, ಸುನೀಲ್, ಗ್ರಾಮ ಪಂಚಾಯಿತಿ ಸದಸ್ಯ ಯದುರಾಜ್ ಸಹಕಾರ ಇಲಾಖೆ ಅಧಿಕಾರಿ ಮಧು, ಕಾರ್ಯ ನಿರ್ವಾಹಕ ಅಧಿಕಾರಿ ಮಧು ಸೇರಿದಂತೆ ಇನ್ನಿತರರು ಹಾಜರಿದ್ದರು.

# ಸ್ಮಾರ್ಟ್ ಕ್ಲಾಸ್ ತೆರೆಯಲು ಉಚಿತ ಉಪಕರಣ

• ಪ್ರಜೋದಯ ವರದಿ



**ಆಲೂರು:** ವಿದ್ಯಾರ್ಥಿಗಳಲ್ಲಿ ಬಾಲ್ಯ ದಲ್ಲೇ ತಂತ್ರಜ್ಞಾನ ಮಾಹಿತಿ ಕಲಿಯಲಿ ಎಂಬ ಉದ್ದೇಶದಿಂದ ಹಂಜಳಿಗೆ ಕಾಳಿಂಗಪ್ಪ ವೆಲ್‌ಫೇರ್ ಅಸೋಸಿ ಯೇಷನ್ ಬೆಂಗಳೂರು ಎಂಬ ಸಂಸ್ಥೆ ಯಡಿಯಲ್ಲಿ ಸ್ಮಾರ್ಟ್‌ಕ್ಲಾಸ್ ಬೇಕಾಗಿ ರುವ ಉಪಕರಣಗಳನ್ನು ಉಚಿತವಾಗಿ ನೀಡಲಾಗುತ್ತಿದೆ ಎಂದು ಅಸೋಸಿ ಯೇಷನ್ ಮುಖ್ಯಸ್ಥ ಮಂಜುನಾಥ್ ಅವರು ತಿಳಿಸಿದರು.

ಭೈರಾಪುರ ಸರ್ಕಾರಿ ಶಾಲೆಗೆ ಸ್ಮಾರ್ಟ್ ಕ್ಲಾಸ್ ತೆರೆಯಲು ಉಪಕರ ಣಗಳನ್ನು ವಿತರಿಸಿ ಮಾತನಾಡಿ, ಸುಮಾರು 2012 ರಿಂದ ನಮ್ಮ ನಡೆ ಸರ್ಕಾರಿ ಶಾಲೆ ಕಡೆ ಎಂಬ ಧ್ಯೇಯ ವನ್ನಿಟ್ಟುಕೊಂಡು ಸರ್ಕಾರಿ ಶಾಲೆ ಗಳನ್ನು ಉಳಿಸುವ ಉದ್ದೇಶದಿಂದ, ತಾಲ್ಲೂಕಿನ 17 ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್, 166 ಶಾಲೆಗಳ ವಿದ್ಯಾ ರ್ಥಿಗಳಿಗೆ 1.25 ಲಕ್ಷ ನೋಟ್ ಬುಕ್ ಗಳು, 6000 ಬ್ಯಾಗ್‌ಗಳನ್ನು ವಿತರಿ ಸಲಾಗಿದೆ. ಮಾಹಿತಿ ತಂತ್ರಜ್ಞಾನವನ್ನು ಬಾಲ್ಯದಲ್ಲೇ ಕಲಿಸಬೇಕೆಂಬ ಉದ್ದೇಶ ದಿಂದ ಹಲವು ಸರ್ಕಾರಿ ಶಾಲೆಗಳಿಗೆ ಸ್ಮಾರ್ಟ್ ಕ್ಲಾಸ್‌ಗೆಂದು ಉಚಿತವಾಗಿ ಲ್ಯಾಪ್‌ಟಾಪ್, ಬೃಹತ್ ಟಿವಿ, ಪ್ರಿಂಟರ್ ಕೊಡುಗೆ ನೀಡುತ್ತಾ ಸರ್ಕಾರಿ ಶಾಲೆಗಳನ್ನು ಪ್ರೋತ್ಸಾಹಿಸು ತ್ತಿದ್ದೇನೆ. ವಿಶೇಷವಾಗಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ. ಮಕ್ಕಳಿಗೆ ಆಂಗ್ಲ ಶಿಕ್ಷಣ ಬೋಧಿಸಲು ಬೇಕಾದ ಕಂಪ್ಯೂ ಟರ್ ಉಪಕರಣಗಳನ್ನು ಕೊಡುತ್ತಿರು ವುದಲ್ಲದೆ, ಅವುಗಳ ದುರಸ್ತಿ ಜವಾಬ್ದಾರಿ ನನ್ನದಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎ.ಜೆ. ಕೃಷ್ಣೇಗೌಡ ಅವರು ಮಾತನಾಡಿ, ಹಂಜಳಿಗೆ ಕಾಳಿಂಗಪ್ಪ ಅಸೋಸಿ ಯೇಷನ್ ವತಿಯಿಂದ ಜಾಗರೀಕರ ಣದ ಹಿನ್ನಲೆಯಲ್ಲಿ ಪ್ರತಿ ಮಗು ತಂತ್ರಜ್ಞಾನದಿಂದ ವಂಚಿತರಾಗಬಾರ ದೆಂಬ ಮೂಲ ಉದ್ದೇಶ ಹೊಂದಿ ದ್ದಾರೆ. ಯಾವುದೇ ಫಲಾಪೇಕ್ಷೆಯಿ ಲ್ಲದೆ ಸಹಕಾರ ನೀಡುತ್ತಿರುವುದು ಶ್ಲಾಘನೀಯ.

ಭೈರಾಪುರ ಶಾಲೆಗೆ ದ್ವಿಭಾಷಾ ಮಾಧ್ಯಮ ಮಂಜೂರಾಗಿದ್ದು, ಇಂಗ್ಲೀಷ್ ಮಾಧ್ಯಮ ಒಂದನೇ ತರಗತಿಯಿಂದಲೆ ಪ್ರಾರಂಭವಾಗಿದೆ. ಸಾವಿರಾರು ರೂ. ಖರ್ಚು ಮಾಡಿ ಖಾಸಗಿ ಶಾಲೆಗೆ ಪೋಷಕರು ತಮ್ಮ ಮಕ್ಕಳನ್ನು ದಾಖಲಿಸುವ ಬದಲು, ಸರ್ಕಾರಿ ಶಾಲೆಗಳಿಗೆ ದಾಖಲಿಸಿ ಉತ್ತಮ ಶಿಕ್ಷಣ ಪಡೆಯಿರಿ ಎಂದರು.

ಆಲೂರು ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷ ನವೀನ್ ಅವರು ಮಾತನಾಡಿ, ವಿದ್ಯಾ ರ್ಥಿಗಳಲ್ಲಿ ಜ್ಞಾನ ವೃದ್ಧಿಯಾಗಲು ದಿನಪತ್ರಿಕೆಗಳು ಸಹಕಾರಿಯಾಗಲಿವೆ ಎಂಬ ಉದ್ದೇಶದಿಂದ ಎಲ್ಲಾ ವಿದ್ಯಾ ರ್ಥಿಗಳಿಗೆ ಪ್ರತಿದಿನ ಉಚಿತವಾಗಿ ದಿನ ಪತ್ರಿಕೆಗಳನ್ನು ಕೊಡುತ್ತೇನೆ ಎಂದರು.

ಎಸ್.ಡಿ.ಎಂ.ಸಿ. ಅಧ್ಯಕ್ಷ ಚಂದ್ರೇ ಗೌಡ, ಶಿಕ್ಷಣ ಇಲಾಖೆ ಸಿ.ಆರ್.ಪಿ. ಬಿಆರ್‌ಪಿ, ಮುಖ್ಯ ಶಿಕ್ಷಕಿ ಎಲಿಜಬೆತ್, ನವೀನ್, ವೀರಭದ್ರಸ್ವಾಮಿ, ಎಸ್ .ಡಿ.ಎಂ. ಸಿ. ಸದಸ್ಯರು ಇದ್ದರು.

# ಯುವನಿಧಿ ಯೋಜನೆಯ ಸ್ವಯಂ- ಘೋಷಣೆ

• ಪ್ರಜೋದಯ ವರದಿ

**ಹಾಸನ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯಲ್ಲಿ ನೋಂದಣಿಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ ಸೀಡೆಡ್ ಬ್ಯಾಂಕ್ ಖಾತೆ ಹೊಂದಿರ ಬೇಕು. ಸೇವಾ ಸಿಂಧೂ ವೆಬ್ ಸೈಟ್ https://sevasindhugs.karnataka.gov.in ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬು ದನ್ನು ಪರಿಶೀಲಿಸಿಕೊಂಡು, ಹಾಗೂ ಪರಿಶೀಲನೆಗೆ ಬಾಕಿ ಉಳಿದಿರುವ ಅಭ್ಯರ್ಥಿಗಳು ಮಾತ್ರ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ, ಪರಿಶೀಲಿಸಿ ಶೀಘ್ರವಾಗಿ ದೃಢೀಕರಿಸಿಕೊಳ್ಳುವಂತೆ ಸೂಚಿಸಲಾಗಿದೆ.

ಫಲಾನುಭವಿಗಳು ಜೂನ್, ಜುಲೈ, ಆಗಸ್ಟ್ ಮಾಹೆಯ ಸ್ವಯಂ-ಘೋಷಣೆಯನ್ನು ಆಗಸ್ಟ್ ತಿಂಗಳಿನ 25ನೇ ದಿನಾಂಕದೊಳಗೆ ಸ್ವಯಂ-ಘೋಷಣೆಯನ್ನು ಮಾಡಿಕೊಳ್ಳಬೇ ಕೆಂದು ಈ ಮೂಲಕ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ: 08172-296374 ನ್ನು ಸಂಪರ್ಕಿಸುವಂತೆ ಹಾಸನ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

## ಹಾಸನದ 6ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯದಲ್ಲಿ

ಸಿ.ಮಿಸ್.687/2025

ಅರ್ಜಿದಾರರು : ನಾಗರತ್ನ ಹೆಚ್.ಪಿ.
ಬಿನ್ ಹರೀಶ್‌ಕುಮಾರ್ ಹೆಚ್.ಎಸ್.
ಸುಮಾರು 59 ವರ್ಷ
ರಕ್ಷಣಾಪುರಂ, 2ನೇ ಕ್ರಾಸ್, ಹಾಸನ-573202

ವಿರುದ್ಧ

ರೆಸ್ಪಾಂಡೆಂಟರು : ಆಯುಕ್ತರು, ಜನನ ಮತ್ತು ಮರಣ
ನೊಂದಣಾಧಿಕಾರಿಗಳು, ನಗರಸಭೆ, ಹಾಸನ.

### ಪತ್ರಿಕಾ ಪ್ರಕಟಣೆ

ಹಾಸನ ತಾಲ್ಲೂಕು, ರಕ್ಷಣಾಪುರಂ, 2ನೇ ಕ್ರಾಸ್‌ನಲ್ಲಿ ವಾಸವಾಗಿರುವ ನಾಗರತ್ನ ರವರ ಮಾವನವರಾದ ಹೆಚ್.ಕೆ.ಸಿದ್ದಯ್ಯ ಬಿನ್ ಲೇಟ್ ಕುಕ್ಕಯ್ಯ ರವರು ದಿನಾಂಕ: 10/08/1960 ರಂದು ಹಾಸನ ತಾಲ್ಲೂಕು, ಸಿದ್ದಯ್ಯನಗರದಲ್ಲಿ ಮರಣ ಹೊಂದಿರುತ್ತಾರೆಂದು ಅರ್ಜಿದಾರರ ಮಾವನ ಮರಣ ಪ್ರಮಾಣ ಪತ್ರವು ಸಂಬಂಧಪಟ್ಟ ಕಚೇರಿಯಲ್ಲಿ ನೊಂದಣಿಯಾಗಿಲ್ಲವೆಂದು ಅರ್ಜಿದಾರರ ಮಾವನವರಾದ ಹೆಚ್.ಕೆ. ಸಿದ್ದಯ್ಯ ಬಿನ್ ಲೇಟ್ ಕುಕ್ಕಯ್ಯ ರವರ ಮರಣ ಪ್ರಮಾಣ ಪತ್ರವು ಅತ್ಯವಶ್ಯಕವಾಗಿ ಬೇಕಾಗಿರುತ್ತದೆಂದು ಮಾನ್ಯ ನ್ಯಾಯಾಲಯದಲ್ಲಿ ಅರ್ಜಿಯನ್ನು ತಂದಿರುತ್ತಾರೆ. ಹೆಚ್.ಕೆ.ಸಿದ್ದಯ್ಯ ಬಿನ್ ಲೇಟ್ ಕುಕ್ಕಯ್ಯ ರವರು ಹಾಸನ ತಾಲ್ಲೂಕಿನ, ಸಿದ್ದಯ್ಯನಗರದವರಾಗಿದ್ದು, ಸದರಿ ಸ್ಥಳದಲ್ಲಿ ಮರಣ ಹೊಂದಿರುತ್ತಾರೆಂದು ಅರ್ಜಿಯಲ್ಲಿ ತಿಳಿಸಿರುತ್ತಾರೆ. ಅರ್ಜಿದಾರರ ಮಾವನವರಾದ ಹೆಚ್.ಕೆ.ಸಿದ್ದಯ್ಯ ಬಿನ್ ಲೇಟ್ ಕುಕ್ಕಯ್ಯ ರವರ ವಾರಸುದಾರರು ಯಾರಾದರೂ ಇದ್ದಲ್ಲಿ ಅರ್ಜಿಯ ವಿರುದ್ಧ ಕಾರಣವನ್ನು ತೋರಿಸಲು ದಿನಾಂಕ: 12/9/25 ರಂದು ಪೂರ್ವಾಹ್ನ 11 ಗಂಟೆಗೆ ನೀವುಗಳು ಖುದ್ದಾಗಿ ಅಥವಾ ಸರಿಯಾಗಿ ಮಾಹಿತಿ ಪಡೆದಿರುವ ವಕೀಲರ ಮೂಲಕ ನ್ಯಾಯಾಲಯದಲ್ಲಿ ಹಾಜರಾಗ ಬೇಕೆಂದು ಇದಕ್ಕೆ ತಪ್ಪಿದರೆ ಸದರಿ ಅರ್ಜಿಯನ್ನು ಏಕಪಕ್ಷೀಯವಾಗಿ ವಿಚಾರಣೆ ಮಾಡಲಾಗುವುದೆಂದು ಮತ್ತು ತೀರ್ಮಾನಿಸಲಾಗುವುದೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

2025ನೇ ವರ್ಷದ ಜುಲೈ ತಿಂಗಳಿಗೆ 31ನೇ ದಿವಸದಂದು ಇದನ್ನು ನನ್ನ ಸಹಿಯೊಡನೆ ಮತ್ತು ನ್ಯಾಯಾಲಯದ ಮೊಹರಿನೊಡನೆ ನೀಡಲಾಗಿದೆ.

ಅರ್ಜಿದಾರರ ಪರ ವಕೀಲರು — ನ್ಯಾಯಾಲಯದ ಅಪ್ಪಣೆ ಮೇರೆಗೆ

ಹೆಚ್.ಆರ್.ಜಯಶಂಕರ್
ವಕೀಲರು
ಹಾಸನ.

ಶಿರಸ್ತೇದಾರರು
ಹಾಸನ 2ನೇ ಅಧಿಕ ಸಿವಿಲ್ ಜಡ್ಜ್ (ಕಿ.ವಿ.)
ನ್ಯಾಯಾಲಯದಲ್ಲಿ


ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಯುವ ಸ್ಪಂದನ
ಮಾನಸಿಕ ಆರೋಗ್ಯಕ್ಕೆ ಸ್ಪಂದನೆ!
■ ದೇಶದಲ್ಲೇ ಮೊದಲ ಬಾರಿಗೆ ಯುವಕರ ಮಾನಸಿಕ ಆರೋಗ್ಯದ ಬಗ್ಗೆ ಕಾಳಜಿ ತೋರುತ್ತಿರುವ ಯೋಜನೆ
■ ಪ್ರತಿ ಜಿಲ್ಲಾ ಕ್ರೀಡಾಂಗಣದಲ್ಲಿ ಸಲಹಾ ಕೇಂದ್ರಗಳು
■ 120+ ನುರಿತ ಸಲಹೆಗಾರರಿಂದ ಆರೋಗ್ಯ, ಸಂಬಂಧ, ಜೀವನಶೈಲಿ ಮತ್ತು ಸುರಕ್ಷತೆ ಬಗ್ಗೆ ಸಲಹೆ
■ ಸುಮಾರು 80 ಲಕ್ಷ ಯುವಕರಿಗೆ ಜಾಗೃತಿ ಮತ್ತು ಮಾರ್ಗದರ್ಶನ
■ ನಿಮ್ಹಾನ್ಸ್ ಸಹಯೋಗದೊಂದಿಗೆ ಅನುಷ್ಠಾನ - ರಾಷ್ಟ್ರೀಯ ಮನ್ನಣೆ ಮತ್ತು ಡಿಜಿಟಲ್ ಬೆಂಬಲ ವ್ಯವಸ್ಥೆ ಹೊಂದಿದೆ
ಮಾನಸಿಕ ಆರೋಗ್ಯಕ್ಕೆ ಸ್ಪಂದನೆ!
ವಿಶ್ವಾಸವುಳ್ಳ ಯುವಕರು
ಪ್ರಬಲ ಕರ್ನಾಟಕ!
ಕರ್ನಾಟಕ ನವ ನಿರ್ಮಾಣಕ್ಕೆ
ಗ್ಯಾರಂಟಿ ಸರ್ಕಾರ...
ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ
CMofKarnataka https://dipr.karnataka.gov.in/
ಕರ್ನಾಟಕ ವಾರ್ತೆ
ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

